ಸಂಪುಟ : 11 ಸಂಚಿಕೆ: 03 ಪುಟ : 4+2 ಬೆಲೆ: 3.00 ಬುಧವಾರ ಜನವರಿ 28 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 03 Pages : 4+2 Price : 3.00 Wednesday January 28 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಗಣರಾಜ್ಯೋತ್ಸವದ ನಿಮಿತ್ತ ಸಾಂಸ್ಕೃತಿಕ ಕಾರ್ಯಕ್ರಮ ಉದ್ಘಾಟಿಸಿದ ಸಚಿವ ಎಚ್.ಕೆ. ಪಾಟೀಲ

# ಜಿಲ್ಲೆಯ ಹೆಸರನ್ನು ನಾಡಿನಾದ್ಯಂತ ಪಸರಿಸಿ




ಜಿಲ್ಲೆಯಲ್ಲಿ ಅನೇಕ ಕಲಾವಿದರಿದ್ದು, ಅದನ್ನು ಅಭಿವ್ಯಕ್ತಪಡಿಸುವ ಉದ್ದೇಶದೊಂದಿಗೆ ಇಂತಹ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. ಜಿಲ್ಲೆಯ ಕಲಾವಿದರು ಇದರ ಸದುಪಯೋಗ ಪಡೆದುಕೊಂಡು ಗದಗ ಜಿಲ್ಲೆಯ ಹೆಸರನ್ನು ನಾಡಿನಾದ್ಯಂತ ಪಸರಿಸಬೇಕೆಂದು ಎಚ್.ಕೆ. ಪಾಟೀಲ ಕರೆ ನೀಡಿದರು.



■ವಿಜಯಸಾಕ್ಷಿ ಸುದ್ದಿ, ಗದಗ

ಕುವೆಂಪು ಅವರು ಹೇಳಿದಂತೆ ಗದಗ ಸರ್ವ ಜನಾಂಗದ ಶಾಂತಿಯ ತೋಟ ಎಂಬುದಕ್ಕೆ ಸಾಕ್ಷಿಯಾಗಿದ್ದು ಕಲೆ ಎಂಬುದನ್ನು ಗದಗ ಜನರಿಂದ ತಿಳಿದುಕೊಳ್ಳಬಹುದಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ನಗರದ ಭೀಷ್ಮಕೆರೆ ಆವರಣದಲ್ಲಿ ಸೋಮವಾರ ಸಾಯಂಕಾಲ ಜರುಗಿದ ಗಣರಾಜ್ಯೋತ್ಸವ ದಿನಾಚರಣೆ ಸಾಂಸ್ಕೃತಿಕ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ನಗರದಲ್ಲಿನ ಭೀಷ್ಮ ಕೆರೆ ಪ್ರವಾಸಿ ತಾಣವಾಗಿದ್ದು, ಕಪ್ಪತಗುಡ್ಡದಲ್ಲಿ ಸಫಾರಿ ವ್ಯವಸ್ಥೆ ಮಾಡಲಾಗಿದೆ. ಪಾಲಕರು ತಮ್ಮ ಮಕ್ಕಳನ್ನು ಪರಿಸರದ ಅರಿವು ಮೂಡಿಸುವ ಉದ್ದೇಶದೊಂದಿಗೆ ಒಮ್ಮೆಯಾದರೂ ಭೇಟಿ ನೀಡಲು ತಿಳಿಸಿದ ಸಚಿವರು, ಲಕ್ಕುಂಡಿಯಲ್ಲಿ ಸದ್ಯ ಚಿನ್ನ ದೊರೆಯುತ್ತಿದ್ದು, ಚಿನ್ನಕ್ಕಿಂತ ಹೆಚ್ಚಿನ ಬೆಲೆಯ ಅಲ್ಲಿನ ಶಿಲ್ಪಕಲೆಗಳ ಕುರಿತು ಮಾಹಿತಿ ಪಡೆಯಬಹುದಾಗಿದೆ. ಇಂದು ಚಿತ್ರಕಲಾ ಶಿಕ್ಷಕರ ಸಂಘದಿಂದ ಆಯೋಜಿಸಲಾದ ಚಿತ್ರಕಲಾ ಪ್ರದರ್ಶನ ಮನಸೂರೆಗೊಂಡಿದ್ದು, ಚಿತ್ರಕಲೆಯನ್ನು ಅಭಿವ್ಯಕ್ತಪಡಿಸಿದ ಚಿತ್ರಕಲಾ ಶಿಕ್ಷಕರ ಸಂಘಕ್ಕೆ 1.5 ಲಕ್ಷ ರೂ.ಗಳ ಅನುದಾನವನ್ನು ಪ್ರೋತ್ಸಾಹ ಧನವನ್ನಾಗಿ ಒದಗಿಸಲು ಸಚಿವ ಎಚ್.ಕೆ. ಪಾಟೀಲ ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿ.ಪಂ ಮಾಜಿ ಅಧ್ಯಕ್ಷ ಸಿದ್ದು ಪಾಟೀಲ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ, ಉಪ ಅರಣ್ಯ ಸಂರಕ್ಷಣಾಧಿಕಾರಿ ಸಂತೋಷಕುಮಾರ, ಉಪವಿಭಾಗಾಧಿಕಾರಿ ಗಂಗಪ್ಪ ಎಂ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಆರ್.ಎಸ್. ಬುರುಡಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ, ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಡಾ. ಶರಣು ಗೋಗೇರಿ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು, ಶಾಲಾ ವಿದ್ಯಾರ್ಥಿಗಳು, ಸಾರ್ವಜನಿಕರು ಉಪಸ್ಥಿತರಿದ್ದರು.

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಸರ್ವರನ್ನೂ ಸ್ವಾಗತಿಸಿದರು. ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಜಿಲ್ಲೆಯ ವಿವಿಧ ಶಾಲಾ ವಿದ್ಯಾರ್ಥಿಗಳು ಹಾಗೂ ಜಾನಪದ ಕಲಾವಿದರಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

## ಉಚಿತ ಹೊಲಿಗೆ ತರಬೇತಿಗೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಸರ್ಕಾರದ ಮುಖ್ಯಮಂತ್ರಿಗಳ ಕೌಶಲ್ಯ ಕರ್ನಾಟಕ ಯೋಜನೆಯಡಿ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯು Self Employed Tailor ಹಾಗೂ Asst. Fashion Designer ಕೋರ್ಸ್‌ಗಳಿಗೆ ಉಚಿತ ತರಬೇತಿಯನ್ನು ಪ್ರಾರಂಭಿಸಿದೆ.

ಕನಿಷ್ಠ 10ನೇ ತರಗತಿ ಪಾಸಾಗಿರುವ, 18ರಿಂದ 35 ವರ್ಷ ವಯಸ್ಸಿನೊಳಗಿರುವ ಕನ್ನಡ ಮತ್ತು ಇಂಗ್ಲೀಷ್ ಓದಲು-ಬರೆಯಲು ಬರುವ ನಿರುದ್ಯೋಗಿಗಳು ತರಬೇತಿಗೆ ಅರ್ಹರಾಗಿರುತ್ತಾರೆ.

ಹೆಸರು ನೋಂದಣಿಗಾಗಿ ತಮ್ಮ ಆಧಾರ್ ಕಾರ್ಡ್, ಜಾತಿ ಮತ್ತು ಆದಾಯ ಪ್ರಮಾಣಪತ್ರ, ಪಾಸ್‌ಪೋರ್ಟ್ ಅಳತೆಯ ಫೋಟೊ, ಜನ್ಮ ದಿನಾಂಕ ನಮೂದಾಗಿರುವ 10ನೇ ತರಗತಿ ಪಾಸಾಗಿರುವ ಮಾರ್ಕ್ಸ್ ಕಾರ್ಡ್ ಇವುಗಳನ್ನು ತರಬೇಕು.

ಅಪ್ಯಾರಲ್ಸ್ (Apparels) ಸೆಕ್ಟರ್‌ನಲ್ಲಿ Self Employed Tailor ಹಾಗೂ Asst. Fashion Designer ಉಚಿತವಾಗಿ ಕಲಿಸಿಕೊಡಲಾಗುವುದು. ಆಸಕ್ತರು ಕೂಡಲೇ ಅನನ್ಯಾ ನಗರ ಹಾಗೂ ಗ್ರಾಮೀಣಾಭಿವೃದ್ಧಿ ವಿವಿಧೋದ್ದೇಶಗಳ ಸಂಸ್ಥೆ, ಬೆಟಗೇರಿ ಇಲ್ಲಿಗೆ ತಮ್ಮ ದಾಖಲಾತಿಗಳೊಂದಿಗೆ Avani Womens Couture, Shop No 1 & 2, Arihant Plaza, Rotary Circle, Gadag-582101-ಗದಗ ಕಛೇರಿಗೆ ಸಂಪರ್ಕಿಸಬೇಕು. ಹೆಚ್ಚಿನ ಮಾಹಿತಿಗಾಗಿ-9844097501, 9916921121 ಇಲ್ಲಿಗೆ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

### ಎಸ್.ಎಸ್.ಕೆ ಜಗದಂಬಾ ಶಿಕ್ಷಣ ಸಂಸ್ಥೆಯಲ್ಲಿ ಮಕ್ಕಳ ರಕ್ಷಣಾ ಕಾರ್ಯಕ್ರಮ

# ಮಕ್ಕಳ ಚಟುವಟಿಕೆಗಳ ಮೇಲೆ ಗಮನವಿರಲಿ




■ವಿಜಯಸಾಕ್ಷಿ ಸುದ್ದಿ, ಬೆಟಗೇರಿ

ಮಕ್ಕಳ ರಕ್ಷಣೆಯಲ್ಲಿ ಶಿಕ್ಷಕರ ಹಾಗೂ ಪಾಲಕರ ಪಾತ್ರ ಮಹತ್ವದ್ದಾಗಿದೆ. ಹೀಗಾಗಿ ಮಕ್ಕಳ ಚಟುವಟಿಕೆಗಳ ಮೇಲೆ ಸದಾ ನಿಗಾ ವಹಿಸುವಂತಹ ಕೆಲಸ ಶಿಕ್ಷಕರು ಹಾಗೂ ಪಾಲಕರು ಮಾಡಬೇಕು. ಅಂದಾಗ ಮಾತ್ರ ಮಕ್ಕಳ ರಕ್ಷಣೆ ಸಾಧ್ಯವಾಗುತ್ತದೆ ಎಂದು ಗದಗ ಜಿಲ್ಲಾ ವಿಶೇಷ ಸರಕಾರಿ ಅಭಿಯೋಜಕ (ಪೋಕ್ಸೋ) ರಾದ ಅಮರೇಶ ಯು.ಹಿರೇಮಠ ಹೇಳಿದರು.

ಅವರು ಬೆಟಗೇರಿಯ ಎಸ್.ಎಸ್.ಕೆ. ಶ್ರೀ ಜಗದಂಬಾ ಶಿಕ್ಷಣ ಸಂಸ್ಥೆಯ ಶ್ರೀಮತಿ ಲೀಲಾಬಾಯಿ ನಾರಾಯಣಸಾ ಬದಿ ಆಂಗ್ಲ ಮಾಧ್ಯಮ ಪ್ರೌಢಶಾಲೆಯಲ್ಲಿ ಹಮ್ಮಿಕೊಂಡಿದ್ದ ಮಕ್ಕಳ ಸುರಕ್ಷತಾ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಬೆಟಗೇರಿ ಪಿಎಸ್‌ಐ ಲಕ್ಷ್ಮಣ ಆರಿ ಮಾತನಾಡಿ, ಮಕ್ಕಳು 18 ವರ್ಷ ತುಂಬುವವರೆಗೂ ವಾಹನಗಳನ್ನು ಚಲಾಯಿಸಬಾರದು. ಅಪರಿಚಿತರು ಕೊಡುವ ಯಾವುದೇ ಪದಾರ್ಥಗಳನ್ನು ತಿನ್ನಬಾರದು. ಇತ್ತೀಚಿನ ದಿನಗಳಲ್ಲಿ ಮೊಬೈಲ್ ಬಳಕೆಯಿಂದಾಗಿ ಸಾಕಷ್ಟು ಮಕ್ಕಳು ದಾರಿ ತಪ್ಪುತ್ತಿದ್ದಾರೆ.

ಹೀಗಾಗಿ ಅಗತ್ಯದ ಕೆಲಸಗಳಿಗಾಗಿ ಮಾತ್ರ ಮೊಬೈಲ್ ಬಳಸಿ, ಓದಿನ ಕಡೆಗೆ ಹೆಚ್ಚು ಗಮನ ಹರಿಸಿದರೆ ನಿಮ್ಮ ಭವಿಷ್ಯ ಉಜ್ವಲವಾಗುತ್ತದೆ ಎಂದರು.

ಡಾ. ಹೀರಾಲಾಲಸಾ ಮೇರವಾಡೆ ಮಾತನಾಡಿ, ಮಕ್ಕಳ ರಕ್ಷಣೆಗೆ ಅನೇಕ ಹಕ್ಕುಗಳನ್ನು ನೀಡಲಾಗಿದೆ. ಅವುಗಳ ರಕ್ಷಣೆ ಮಾಡುವುದು ಎಲ್ಲರ ಜವಾಬ್ದಾರಿಯಾಗಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಬೆಟಗೇರಿಯ ಎಸ್.

ಸೌಖ್ಯದಾ ಆಸ್ಪತ್ರೆಯ ವೈದ್ಯರಾದ ಡಾ. ತೇಜಸ್ವಿನಿ ಹಿರೇಮಠ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಅಪ್ರಾಪ್ತರ ಮೇಲೆ ಸಾಕಷ್ಟು ಲೈಂಗಿಕ ದೌರ್ಜನ್ಯಗಳು ಜರುಗುತ್ತಿದ್ದು, ಪ್ರತಿಯೊಬ್ಬ ಅಪ್ರಾಪ್ತರು ಜಾಗರೂಕರಾಗಿರಬೇಕು. ಶಾಲೆಯ ಒಳಗೆ ಅಥವಾ ಮನೆಯಲ್ಲಿ ಯಾರೇ ಆದರೂ ತಮ್ಮ ಜೊತೆ ಅಸಭ್ಯವಾಗಿ ವರ್ತಿಸಿದರೆ, ಅಶ್ಲೀಲವಾಗಿ ಮಾತನಾಡಿದರೆ ಅಥವಾ ಅಶ್ಲೀಲ ಚಿತ್ರಗಳನ್ನು ತೋರಿಸಿದರೆ, ಅನುಚಿತವಾಗಿ ವರ್ತಿಸಿದರೆ ಕೂಡಲೇ ಪಾಲಕರ ಗಮನಕ್ಕೆ ತರಬೇಕು. ಮಕ್ಕಳ ಸುರಕ್ಷತೆಗೆ ಹಲವಾರು ಸವಾಲುಗಳು ಬರುತ್ತವೆ. ಅವುಗಳನ್ನು ಅತ್ಯಂತ ಜಾಗರೂಕತೆಯಿಂದ ಎದುರಿಸಬೇಕು ಎಂದರು.

ಎಸ್.ಕೆ ಪಂಚ ಟ್ರಸ್ಟ್ ಕಮಿಟಿಯ ಅಧ್ಯಕ್ಷ ಲೋಕನಾಥ ಬಿ.ಕಬಾಡಿ ಮಾತನಾಡಿ, ನಮ್ಮ ಶಾಲೆಯಲ್ಲಿ ಸುರಕ್ಷತಾ ದೃಷ್ಟಿಯಿಂದ ಎಲ್ಲ ಅಗತ್ಯ ಕ್ರಮಗಳನ್ನು ಕೈಗೊಂಡಿದ್ದು, ಮಕ್ಕಳಿಗೆ ಯಾವುದೇ ತೊಂದರೆ-ಯಾಗದಂತೆ ರಕ್ಷಣಾತ್ಮಕ ಕ್ರಮಗಳನ್ನು ವಹಿಸುತ್ತಿದ್ದೇವೆ ಎಂದರು.

ಶಿಕ್ಷಣ ಸಂಸ್ಥೆಯ ಚೇರಮನ್ ಜಿ.ವಿ. ಬಸವಾ ಪ್ರಾಸ್ತಾವಿಕವಾಗಿ ಮಾತನಾಡಿ, ನಮ್ಮ ಶಾಲೆಯಲ್ಲಿ ಈಗಾಗಲೇ ಸಿ.ಸಿ ಕ್ಯಾಮೆರಾಗಳನ್ನು ಅಳವಡಿಸುವ ಮೂಲಕ ವಿದ್ಯಾರ್ಥಿಗಳ ಪ್ರತಿಯೊಂದು ಚಟುವಟಿಕೆಗಳ ಮೇಲೆ ನಿಗಾ ವಹಿಸಲಾಗಿದೆ ಎಂದರು.

ಶಿಕ್ಷಕಿ ಸುಮಂಗಲಾ ಆಸಂಗಿ ಸ್ವಾಗತಿಸಿದರು. ಶಿಕ್ಷಕ ಗಣಪತಿ ಹೆಗಡೆ ನಿರೂಪಿಸಿದರು, ಮುಖ್ಯೋಪಾಧ್ಯಾಯ ಎಸ್.ಡಿ. ಬೆನಕಲ್ ವಂದಿಸಿದರು.

# ನಾಪತ್ತೆಯಾಗಿದ್ದ ವೃದ್ಧ ಪತ್ತೆ: ಗದಗ ಪೊಲೀಸರ ಮಾನವೀಯತೆಗೆ ಮೆಚ್ಚುಗೆ



■ವಿಜಯಸಾಕ್ಷಿ ಸುದ್ದಿ, ಗದಗ

ಧಾರವಾಡ ಜಿಲ್ಲೆಯ ಅಣ್ಣಿಗೇರಿ ತಾಲೂಕಿನ ಅಡ್ನೂರ ಉರುಸ್‌ನಲ್ಲಿ ನಾಪತ್ತೆಯಾಗಿದ್ದ ವ್ಯಕ್ತಿಯನ್ನು ಗದಗ ಗ್ರಾಮೀಣ ಪೊಲೀಸರು ಪತ್ತೆ ಹಚ್ಚಿ ಕುಟುಂಬಸ್ಥರಿಗೆ ಒಪ್ಪಿಸಿ ಮಾನವೀಯತೆ ಮೆರೆದ ಘಟನೆ ಜರುಗಿದೆ.

ಗದಗ ಗ್ರಾಮೀಣ ಠಾಣೆಯ ಸಿಬ್ಬಂದಿಗಳಾದ ಮೆಹಬೂಬ್ ವಡ್ಡಟ್ಟಿ ಹಾಗೂ ಪ್ರಕಾಶ್ ಗಾಣಿಗೇರ ಎಂಬುವವರೇ ಮಾನವೀಯತೆ ಮೆರೆದ ಸಿಬ್ಬಂದಿಗಳು.

ಡಿಸೆಂಬರ್ 31ರಂದು ಅಡ್ನೂರ ಗ್ರಾಮದಿಂದ ಬೆಳಗಿನ ಜಾವ ಅಲ್ಲಾಸಾಬ ಹುಸೇನ್ ಸಾಬ ದೊಡ್ಡಮನಿ (60) ಎಂಬುವವರು ನಾಪತ್ತೆಯಾಗಿದ್ದರು. ಅಂದಿನಿಂದ ಕುಟುಂಬದ ಸದಸ್ಯರು ಎಲ್ಲಾ ಕಡೆ ಹುಡುಕಾಟ ನಡೆಸಿದ್ದರು. ಆದರೂ ಪತ್ತೆಯಾಗಿರಲಿಲ್ಲ. ಸೋಮವಾರ ಗದಗ ತಾಲೂಕಿನ ಬಳಗಾನೂರ ಚಿಕೆನಕೊಪ್ಪದ ಶರಣರ ಜಾತ್ರೆಯ ಬಂದೋಬಸ್ತ್‌ಗೆ ಹೊರಟಿದ್ದ ಇಬ್ಬರು ಸಿಬ್ಬಂದಿ ದಾರಿಯ ಪಕ್ಕದಲ್ಲಿ ಮಲಗಿದ್ದ ವ್ಯಕ್ತಿಯನ್ನು ನೋಡಿ ಮಾತನಾಡಿಸಿದ್ದಾರೆ. ಆದರೆ ಆತ ಮಾತನಾಡುವ ಸ್ಥಿತಿಯಲ್ಲಿ ಇರಲಿಲ್ಲ. ನಿತ್ರಾಣಗೊಂಡಿದ್ದಾತನನ್ನು ಬಳಗಾನೂರಿಗೆ ಕರೆದುಕೊಂಡು ಹೋಗಿ ಜ್ಯೂಸ್ ಕುಡಿಸಿದ್ದಾರೆ. ಇದರಿಂದಾಗಿ ಚೇತರಿಸಿಕೊಂಡ ಆ ವ್ಯಕ್ತಿ ತೊದಲುತ್ತಾ, ಅಸ್ಪಷ್ಟವಾಗಿ ಸಣ್ಣ ಧ್ವನಿಯಲ್ಲಿ ಮಾತನಾಡಿದಾಗ ಆತ ಯಾರು, ಎಲ್ಲಿಯವನು ಎಂಬ ಮಾಹಿತಿ ತಿಳಿದಿಲ್ಲ. ನಂತರ ಬಿಳೆಹಾಳೆ ಹಾಗೂ ಪೆನ್ನು ಕೊಟ್ಟ ಪೊಲೀಸರು, ಆ ಹಾಳೆಯಲ್ಲಿ ಬರೆಯಲು ಹೇಳಿದಾಗ ಆತನ ಹೆಸರು, ತನ್ನ ಊರಿನ ಹೆಸರು ಬರೆದಿದ್ದಾನೆ. ಆಗ ಮಾಹಿತಿ ಕಲೆ ಹಾಕಿದ ಪೊಲೀಸರು, ಅಣ್ಣಿಗೇರಿ ಠಾಣೆಯಲ್ಲಿ ಮಿಸ್ಸಿಂಗ್ ಕೇಸ್ ದಾಖಲಾದ ಬಗ್ಗೆ ತಿಳಿದುಕೊಂಡು ಅವರ ಕುಟುಂಬದ ಸದಸ್ಯರನ್ನು ಕರೆಸಿ ಅವರಿಗೆ ಒಪ್ಪಿಸಿ ಮಾನವೀಯತೆ ಮೆರೆದಿದ್ದಾರೆ.

ಮೆಹಬೂಬ್ ವಡ್ಡಟ್ಟಿ ಹಾಗೂ ಪ್ರಕಾಶ್ ಗಾಣಿಗೇರ ಅವರ ಈ ಕಾರ್ಯಕ್ಕೆ ವೃದ್ಧ ಅಲ್ಲಾಸಾಬನ ಕುಟುಂಬಸ್ಥರು ಹಾಗೂ ಪೊಲೀಸ್ ಅಧಿಕಾರಿಗಳು ಪ್ರಶಂಸೆ ವ್ಯಕ್ತಪಡಿಸಿದ್ದಾರೆ.

### ಜಿಲ್ಲಾಡಳಿತ ಭವನದಲ್ಲಿ ಶ್ರೀ ಸವಿತಾ ಮಹರ್ಷಿ ಜಯಂತಿ ಆಚರಣೆ

# ಸವಿತಾ ಸಮಾಜದವರ ಕೊಡುಗೆ ಅಪಾರ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಮಂಗಳವಾರ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರುಗಳ ಸಹಯೋಗದಲ್ಲಿ ಶ್ರೀ ಸವಿತಾ ಮಹರ್ಷಿ ಜಯಂತಿ ಕಾರ್ಯಕ್ರಮವನ್ನು ಆಚರಿಸಲಾಯಿತು.

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ಸವಿತಾ ಮಹರ್ಷಿಗಳು ಶಿವನ ದಿವ್ಯ ದೃಷ್ಟಿಯಲ್ಲಿ ಜನ್ಮ ತಾಳಿದವರು. ಪ್ರತಿಯೊಬ್ಬರೂ ಅಂದವಾಗಿ ಕಾಣಲು ಸವಿತಾ ಸಮಾಜದವರ ಕೊಡುಗೆ ಅಪಾರವಾಗಿದೆ. ಶಿವನು ಸವಿತಾ ಮಹರ್ಷಿಗಳಿಗೆ ಮಂಗಳವಾದ್ಯಗಳನ್ನು ಕೊಟ್ಟನು ಎಂದು ಉಲ್ಲೇಖಿಸಲಾಗಿದೆ. ಸವಿತಾ ಮಹರ್ಷಿಗಳು ಸಾಮವೇದವನ್ನು ರಚಿಸಿದವರು. ಸವಿತಾ ಸಮಾಜದವರು ಸಂಗೀತ ಪ್ರಿಯರಾಗಿದ್ದು, ಶುಭ ಸಮಾರಂಭಗಳಲ್ಲಿ ವಾದ್ಯ




ನುಡಿಸುವುದನ್ನು ಕಾಣಬಹುದಾಗಿದೆ ಎಂದು ಹೇಳಿದರು.

ಯುವ ಮುಖಂಡ ಕೃಷ್ಣಗೌಡ ಪಾಟೀಲ ಮಾತನಾಡಿ, ಸರ್ಕಾರದ ವತಿಯಿಂದ ಸವಿತಾ ಮಹರ್ಷಿಗಳ ಜಯಂತಿ ಆಚರಿಸುತ್ತಿರುವುದು ಸಂತಸದ ವಿಷಯವಾಗಿದೆ. ಸಮ-ಸಮಾಜ ನಿರ್ಮಾಣ ಮಾಡುವುದು ಎಲ್ಲರ ಕರ್ತವ್ಯವಾಗಿದೆ. ಶ್ರಮದ ಮೂಲಕ ಗುರುತಿಸಿಕೊಂಡಿರುವ ಸಮಾಜವೇ ಸವಿತಾ ಸಮಾಜವಾಗಿದೆ. ಸವಿತಾ ಮಹರ್ಷಿಗಳ ತತ್ವಗಳನ್ನು ಎಲ್ಲರೂ ಪಾಲಿಸಬೇಕೆಂದು ಕರೆ ನೀಡಿದರು.

ಇದೇ ಸಂದರ್ಭದಲ್ಲಿ ಸಮಾಜದ ಹಿರಿಯರನ್ನು ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಅಪರ ಜಿಲ್ಲಾಧಿಕಾರಿ ದುರಗೇಶ್ ಕೆ.ಆರ್, ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಉಪವಿಭಾಗಾಧಿಕಾರಿ ಗಂಗಪ್ಪ ಎಂ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರುಡಿ, ತಹಸೀಲ್ದಾರ ಶ್ರೀನಿವಾಸಮೂರ್ತಿ ಕುಲಕರ್ಣಿ, ರವಿಕುಮಾರ್ ರೆಡ್ಡಿ, ಹನುಮಂತಪ್ಪ, ವೆಂಕಟೇಶ ರಣತೂರ, ಸಮಾಜದ ಗಣ್ಯರು, ಹಿರಿಯರು, ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು. ಸವಿತಾ ಸಮಾಜದ ಅಧ್ಯಕ್ಷ ಕೃಷ್ಣ ಹಡಪದ ಸ್ವಾಗತಿಸಿದರು. ಪ್ರೊ. ಬಾಹುಬಲಿ ಜೈನರ ಕಾರ್ಯಕ್ರಮ ನಿರೂಪಿಸಿದರು. ಪಿಪಿಜಿ ಸಂಗೀತ ಮಹಾವಿದ್ಯಾಲಯದ ವಿದ್ಯಾರ್ಥಿಗಳು ನಾಡಗೀತೆ ಪ್ರಸ್ತುತಪಡಿಸಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ ವಂದಿಸಿದರು.

## ರಾಜ್ಯದ ಎಲ್ಲಾ ಗ್ರಾಮ ಪಂಚಾಯತ್‌ಗಳಿಗೆ ಮಹಾತ್ಮಗಾಂಧಿ ಹೆಸರು: ಸಿಎಂ ಸಿದ್ದರಾಮಯ್ಯ ಘೋಷಣೆ



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ರಾಜ್ಯದ ಎಲ್ಲಾ ಗ್ರಾಮ ಪಂಚಾಯತ್‌ಗಳಿಗೆ ಮಹಾತ್ಮ ಗಾಂಧಿಯವರ ಹೆಸರಿಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಿಸಿದರು.

ಕೇಂದ್ರ ಸರ್ಕಾರ ನರೇಗಾ ಬದಲಾಗಿ ಜಾರಿಗೆ ತಂದಿರುವ ವಿಬಿ-ಜಿ ರಾಮ್ ಜಿ ಕಾಯ್ದೆ ವಿರುದ್ಧ ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನವನದಲ್ಲಿ ಮಂಗಳವಾರ (ಜ.27) ಕೆಪಿಸಿಸಿ ಆಯೋಜಿಸಿದ್ದ ಪ್ರತಿಭಟನಾ ಸಮಾವೇಶದಲ್ಲಿ ಅವರು ಮಾತನಾಡಿದರು.

ಮಹಾತ್ಮಗಾಂಧಿ ಹೆಸರು ಕೇಳಿದರೆ ಬಿಜೆಪಿಯವರಿಗೆ ಆಗಲ್ಲ. ಹಾಗಾಗಿ, ದುರುದ್ದೇಶದಿಂದ 'ನರೇಗಾ' ಹೆಸರು ಬದಲಾವಣೆ ಮಾಡಿ 'ವಿಬಿ- ಜಿ ರಾಮ್ ಜಿ' ಮಾಡಿದ್ದಾರೆ ಎಂದು ಸಿಎಂ ಹೇಳಿದರು.

ನರೇಗಾ ಕಾಯ್ದೆಯನ್ನು ಹೆಸರನ್ನು ವಿಬಿ-ಜಿ ರಾಮ್ ಜಿ ಎಂದು ಬದಲಾಯಿಸಿ 'ರಾಮ' ಎಂಬ ಹೆಸರು ಬರುವಂತೆ ಮಾಡಿದ್ದಾರೆ. ಆದರೆ, ಇದ ದಶರಥ ರಾಮ, ಕೌಸಲ್ಯ ರಾಮ, ಸೀತಾ ರಾಮ ಅಲ್ಲ. ಈ ಕಾಯ್ದೆಯಲ್ಲಿ ರಾಮ ಇಲ್ಲ. ಬಡವರು ದಲಿತರು, ರೈತರ ಬಗ್ಗೆ ಚಿಂತಿಸುವುದು ಕಾಂಗ್ರೆಸ್ ಮಾತ್ರ. ಬಡವರ ಬಗ್ಗೆ ಮಾತಾಡುವುದು ಕಾಂಗ್ರೆಸ್ ಮಾತ್ರ ಎಂದರು.

ಆರ್‌ಎಸ್‌ಎಸ್ ಮಾರ್ಗ ದರ್ಶನದಂತೆ ಬಡವರ ಕಾರ್ಯಕ್ರಮಗಳನ್ನು ಬಿಜೆಪಿಯವರು ರದ್ದು ಮಾಡಿದ್ದಾರೆ. ಆರ್‌ಎಸ್‌ಎಸ್‌ನವರಿಗೆ ಬಡವರು ಮುಖ್ಯವಾಹಿನಿಗೆ ಬರುವುದು ಬೇಕಾಗಿಲ್ಲ.

ಬಡವರು ಬಡವರಾಗಿಯೇ ಉಳಿದು ಸದಾಕಾಲ ಸೇವಕರಾಗಿಯೇ ಇರಬೇಕು ಎನ್ನುವುದು ಅವರ ಸಿದ್ಧಾಂತ. ಬಡವರ ವಿರೋಧಿ ಬಿಜೆಪಿ ಬಡವರ ಪರವಾದ ಎಲ್ಲ ಕಾರ್ಯಕ್ರಮಗಳನ್ನೂ ರದ್ದುಗೊಳಿಸುತ್ತಿದೆ ಎಂದು ಸಿಎಂ ವಾಗ್ದಾಳಿ ನಡೆಸಿದರು.

### ಪತ್ರಿಕಾಗೋಷ್ಠಿಯಲ್ಲಿ ಜಾತ್ರಾ ಸಮಿತಿ ಅಧ್ಯಕ್ಷ ಗಂಗಪ್ಪ ಸುಂಕಾಪೂರ ಮಾಹಿತಿ

# ಬಾಲಲೀಲಾ ಮಾಹಾಂತ ಶಿವಯೋಗಿಗಳ ಜಾತ್ರಾ ಮಹೋತ್ಸವ ಜ. 30ರಿಂದ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಶರಣ ಸಂಸ್ಕೃತಿಯ ಪಾವನ ತಾಣ ಮುಳಗುಂದ ಪಟ್ಟಣದ ಬಾಲಲೀಲಾ ಮಾಹಾಂತ ಶಿವಯೋಗಿಗಳ 167ನೇ ಸ್ಮರಣೋತ್ಸವದ ಅಂಗವಾಗಿ ಜ. 30, 31 ಹಾಗೂ ಫೆ. 1ರಂದು ಜಾತ್ರಾ ಮಹೋತ್ಸವ ಅರ್ಥಪೂರ್ಣವಾಗಿ ಜರಗಲಿದೆ ಎಂದು ಜಾತ್ರಾ ಸಮಿತಿ ಅಧ್ಯಕ್ಷ ಗಂಗಪ್ಪ ಸುಂಕಾಪೂರ ತಿಳಿಸಿದರು.

ಈ ಕುರಿತು ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಜ. 30ರಂದು ಬೆಳಿಗ್ಗೆ 9 ಗಂಟೆಗೆ ಷಟ್‌ಸ್ಥಲ ಧ್ವಜಾರೋಹಣ ಅಗಡಿ-ಗುತ್ತಲ ಪ್ರಭುಸ್ವಾಮಿಮಠದ ಗುರುಸಿದ್ದ ಮಾಹಾಸ್ವಾಮಿಗಳ ಲಿಂಗಹಸ್ತದಿಂದ ಜರಗುವುದು. ಷಟ್‌ಸ್ಥಳ ನುಡಿಯನ್ನು ನೀಲಗುಂದ ಗುದ್ನೇಶ್ವರಮಠದ ಪ್ರಭುಲಿಂಗದೇವರು, ಸಮ್ಮುಖವನ್ನು ಕೆರೂರ ವಿರಕ್ತಮಠದ ವಿಜಯಮಾಹಾಂತ ದೇವರು ವಹಿಸುವರು. ಬೆಳಿಗ್ಗೆ 10 ಗಂಟೆಗೆ ಕಲ್ಮಠ ಆವರಣದಲ್ಲಿನ ಲಿಂಗೈಕ್ಯ ಬಸಮ್ಮಾ ಪಿರಂಗಿಯವರ ಗದ್ದುಗೆ ಲೋಕಾರ್ಪಣೆ, ಉಚಿತ ನೇತ್ರ ತಪಾಸಣೆ, ಸಾಯಂಕಾಲ 5 ಗಂಟೆಗೆ ಜಾತ್ರಾ ಮಹೋತ್ಸವದ ಉದ್ಘಾಟನಾ ಕಾರ್ಯಕ್ರಮ ನಡೆಯಲಿದ್ದು, ಸಾನ್ನಿಧ್ಯವನ್ನು ಹುಬ್ಬಳ್ಳಿ ಮೂರುಸಾವಿರಮಠದ ಡಾ. ಗುರುಸಿದ್ಧ ರಾಜಯೋಗೀಂದ್ರ ಮಾಹಾಸ್ವಾಮಿಗಳು, ಸಮ್ಮುಖವನ್ನು ಶಿವಮೊಗ್ಗ ಜಿಲ್ಲೆ ಜಡೆ ಸಂಸ್ಥಾನಮಠದ ಡಾ. ಮಾಹಾಂತ ಮಾಹಾಸ್ವಾಮಿಗಳು, ಬನವಾಸಿ ಅಲ್ಲಮಪ್ರಭು ಹೊಳೆಮಠದ ನಾಗಭೂಷಣ ಮಾಹಾಸ್ವಾಮಿಗಳು ವಹಿಸುವರು.

ಉದ್ಘಾಟಕರಾಗಿ ನಿವೃತ್ತ ಜಿಲ್ಲಾಧಿಕಾರಿ ಹಾಗೂ ಶರಣ ಸಾಹಿತ್ಯ ಪರಿಷತ್ತು ರಾಜ್ಯಾಧ್ಯಕ್ಷ ಸಿ. ಸೋಮಶೇಖರ ಆಗಮಿಸುವರು. ಅಧ್ಯಕ್ಷತೆಯನ್ನು ಮುಳಗುಂದ ಅರ್ಬನ್ ಬ್ಯಾಂಕ್ ಅಧ್ಯಕ್ಷ ಎಸ್. ಎಂ. ನೀಲಗುಂದ ವಹಿಸುವರು. ಮುಖ್ಯ ಅತಿಥಿಗಳಾಗಿ ಮಾಜಿ ಶಾಸಕ ಡಿ.ಆರ್. ಪಾಟೀಲ, ಕುಂದಗೋಳ ಶಾಸಕ ಎಂ.ಆರ್. ಪಾಟೀಲ, ಉಪನ್ಯಾಸಕರಾಗಿ ಧಾರವಾಡದ ಡಿ.ಎಂ. ಹಿರೇಮಠ ಪಾಲ್ಗೊಳ್ಳುವರು. ಬಾಲಲೀಲಾ ಮಾಹಾಂತ ಶಿವಯೋಗಿಗಳ ಕೈವಲ್ಯ ದರ್ಪಣ, ವಚನ ನೃತ್ಯ ಗದಗ ನಿಮಷಾಂಬ ಜ್ಯೋತಿಶ್ರೀ ನಾಟ್ಯ ಅಕಾಡೆಮಿಯವರಿಂದ ಸಾಂಸ್ಕೃತಿಕ ಕಾರ್ಯಕ್ರಮ ಜರಗುವುದು.




ಜ. 31ರಂದು ಸಾಯಂಕಾಲ 5 ಗಂಟೆಗೆ ಮಹಾ ರಥೋತ್ಸವ ಜರಗುವುದು. ನಂತರ ನಡೆಯುವ ಅನುಭವ ಗೋಷ್ಠಿಯ ಸಾನ್ನಿಧ್ಯವನ್ನು ಶಿವಮೊಗ್ಗದ ಆನಂದಪುರಂ ಮುರುಘಾಮಠದ ಮಲ್ಲಿಕಾರ್ಜುನ ಮುರುಘರಾಜೇಂದ್ರ ಮಾಹಾಸ್ವಾಮಿಗಳು ವಹಿಸುವರು. ಸಮ್ಮುಖವನ್ನು ಹಂಸಭಾವಿ ಶಿವಯೋಗಾಶ್ರಮದ ಸಿದ್ದಲಿಂಗ ಮಾಹಾಸ್ವಾಮಿಗಳು, ಅಗಡಿ ಅಕ್ಕಿಮಠದ ಗುರುಲಿಂಗ ಮಾಹಾಸ್ವಾಮಿಗಳು ವಹಿಸುವರು. ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ, ಗೌರಮ್ಮಾ ಬಡ್ನಿ, ಮಾಹಾದೇವಪ್ಪ ಬಟ್ಟೂರ ಪಾಲ್ಗೊಳ್ಳುವರು.

ಏಕಲವ್ಯ ಪ್ರಶಸ್ತಿ ವಿಜೇತೆ ಐಶ್ವರ್ಯ ಕರಿಗಾರರನ್ನು ಸನ್ಮಾನಿಸಲಾಗುವುದು. ಧಾರವಾಡದ ವೀಣಾ ಬಿರಾದಾರ ಉಪನ್ಯಾಸ ನೀಡಲಿದ್ದು, ಮುಂಡರಗಿಯ ಕರ್ನಾಟಕ ಮೇಲೋಡಿಸ್ ಇವರಿಂದ ರಸಮಂಜರಿ ಕಾರ್ಯಕ್ರಮ ಜರುಗಲಿದೆ.

ಫೆ. 1ರಂದು ಸಾಯಂಕಾಲ 5 ಗಂಟೆಗೆ ಕಡುಬಿನ ಕಾಳಗವನ್ನು ಗವಿಮಠದ ಮಲ್ಲಿಕಾರ್ಜುನ ಮಾಹಾಸ್ವಾಮಿಗಳು ನೆರವೇರಿಸುವರು. 7 ಗಂಟೆಗೆ ಅನುಭಾವ ಗೋಷ್ಠಿಯ ಸಾನ್ನಿಧ್ಯವನ್ನು ನಿಡಸೋಸಿ ಸಿದ್ದಸಂಸ್ಥಾನಮಠದ ಡಾ. ಪಂಡಿತ ಶಿವಲಿಂಗೇಶ್ವರ ಮಾಹಾಸ್ವಾಮಿಗಳು, ಸಮ್ಮುಖವನ್ನು ಅಮ್ಮಿನಭಾವಿ ಪಂಚಗೃಹ ಹಿರೇಮಠದ ಅಭಿನವ ಶಾಂತಲಿಂಗ ಶಿವಾಚಾರ್ಯ ಮಾಹಾಸ್ವಾಮಿಗಳು ವಹಿಸುವರು. ಮುಖ್ಯ ಅತಿಥಿಗಳಾಗಿ ವಿ.ಪ ಸದಸ್ಯ ಎಸ್.ವಿ. ಸಂಕನೂರ, ಆನಂದ ಗಡ್ಡದೇವರಮಠ, ಕೃಷ್ಣಗೌಡ ಪಾಟೀಲ, ಡಾ. ಎಸ್.ಸಿ. ಚವಡಿ ಪಾಲ್ಗೊಳ್ಳುವರು. ವೀಣಾ ಯಲಿಗಾರ ಇವರಿಂದ ಉಪನ್ಯಾಸ, ಕುಮಾರೇಶ್ವರ ಕೃಪಾಪೋಷಿತ ಪಂಡಿತ ಪಂಚಾಕ್ಷರ ಗವಾಯಿಗಳವರ ನಾಟ್ಯ ಸಂಘ ಗದಗ ಇವರಿಂದ 'ಅಜಾತ ನಾಗಲಿಂಗ ಲೀಲೆ', ವಿಜಯಲಕ್ಷ್ಮಿ ಹಿರೇಮಠ ಹಾಗೂ ಸಂಗಡಿಗರಿಂದ ವಚನ ಸಂಗೀತ ಜರುಗಲಿದೆ ಎಂದು ಗಂಗಪ್ಪ ಸುಂಕಾಪೂರ ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಮುಖಂಡರಾದ ಎಸ್.ಎಂ. ನೀಲಗುಂದ, ಎಂ.ಡಿ. ಬಟ್ಟೂರ, ಅಶೋಕ ಸೋನಗೋಜಿ, ಡಾ. ಎಸ್.ಸಿ. ಚವಡಿ, ಬಸವರಾಜ ಬಡ್ನಿ, ಐ.ಎಂ. ಶೇಖ, ಎಸ್.ಸಿ. ಬಡ್ನಿ, ಹೊನ್ನಪ್ಪ ನೀಲಗುಂದ ಇದ್ದರು.

### ಬಿ.ಸಿ. ಬಂಗಾರಿ ಶಾಲೆಯಲ್ಲಿ ಪ್ರಜಾರಾಜ್ಯೋತ್ಸವ, ವಾರ್ಷಿಕೋತ್ಸವ, ಪಾಲಕರ ದಿನಾಚರಣೆ

# ಕನ್ನಡ ಮಾಧ್ಯಮ ತಾಯಿಯ ಮಡಿಲಿದ್ದಂತೆ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಕನ್ನಡ ಮಾಧ್ಯಮ ಶಾಲೆಗಳು ನಮ್ಮ ಭಾರತೀಯ ಸಂಸ್ಕೃತಿ, ಸಂಸ್ಕಾರ ಬಿತ್ತಿ ಉತ್ತಮ ನಾಗರಿಕರನ್ನಾಗಿ ಮಾಡುವ ಶಕ್ತಿ ಹೊಂದಿವೆ ಎಂದು ಅರಣ್ಯ ನಿಗಮದ ಮಾಜಿ ಅಧ್ಯಕ್ಷ ಹಾಗೂ ಚಂದನ ಶಿಕ್ಷಣ ಸಂಸ್ಥೆಯ ಸಂಸ್ಥಾಪಕ ಟಿ. ಈಶ್ವರ ಹೇಳಿದರು.

ಪಟ್ಟಣದ ಬಾಲಲೀಲಾ ಮಾಹಾಂತ ಶಿವಯೋಗಿ ಶಿಕ್ಷಣ ಸಮಿತಿಯ ಬಿ.ಸಿ. ಬಂಗಾರಿ ಪೂರ್ವ ಪ್ರಾಥಮಿಕ, ಅನುದಾನಿತ ಪ್ರಾಥಮಿಕ ಶಾಲೆಯ ಪ್ರಜಾರಾಜ್ಯೋತ್ಸವ, ವಾರ್ಷಿಕೋತ್ಸವ, ಪಾಲಕರ ದಿನಾಚರಣೆಯನ್ನು ಹಾಗೂ ಸಾಂಸ್ಕೃತಿಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಭಾರತಿಯ ಸಂಸ್ಕೃತಿ ಉಳಿಸಿ-ಬೆಳೆಸಲು ಕನ್ನಡ ಮಾಧ್ಯಮ ಶಾಲೆಗಳ ಪಾತ್ರ ಅತ್ಯಂತ ಪ್ರಮುಖವಾಗಿದ್ದು, ಇಂದು ಸಾಕಷ್ಟು ಮಹನೀಯರು, ಸಾಧಕರು ಎಲ್ಲರೂ ಕನ್ನಡ ಮಾಧ್ಯಮದಲ್ಲೇ ಕಲಿತವರು. ಕನ್ನಡ ಮಾಧ್ಯಮ ತಾಯಿಯ ಮಡಿಲು ಇದ್ದಹಾಗೆ. ಈ ನಿಟ್ಟಿನಲ್ಲಿ ಬಿ.ಸಿ. ಬಂಗಾರಿ ಪ್ರಾಥಮಿಕ ಶಾಲೆಯು ಸಂಸ್ಕಾರ ನೀಡುವುದರಲ್ಲಿ ಎಂದೆಂದಿಗೂ ಮುಂದಿನ ಸ್ಥಾನದಲ್ಲಿವೆ. ಕನ್ನಡ ಶಾಲೆಗಳು ಉಳಿಯಬೇಕು, ಬೆಳೆಯಬೇಕು.

ಸಾಧಕ ವಿದ್ಯಾರ್ಥಿಗಳಿಗೆ ನಮ್ಮ ಚಂದನ ಪ್ರೌಢಶಾಲೆಯಲ್ಲಿ ಉಚಿತ ಶಿಕ್ಷಣ ಕೊಡಿಸಲು ನಾನು ಸಿದ್ಧನಿದ್ದೇನೆ ಎಂದರು.

ಗದಗ ಅಂಚೆ ಅಧೀಕ್ಷಕ ಷಣ್ಮುಖ ಶಿರಹಟ್ಟಿ ಮಾತನಾಡಿ, ಬಿ.ಸಿ. ಬಂಗಾರಿ ಶಾಲೆಯಲ್ಲಿ ಮೊದಲು ಕಲಿಸುವುದೇ ನಮ್ಮ ಭಾರತೀಯ ಸಂಸ್ಕೃತಿಯನ್ನು. ಮುಳಗುಂದ ಪಟ್ಟಣವು ಶರಣ ಸಂಸ್ಕೃತಿಯ ನೆಲೆಬೀಡಾಗಿದ್ದು, ಮಕ್ಕಳಿಗೆ ಶಿಕ್ಷಣದ ಜೊತೆಯಲ್ಲಿ ಸಂಸ್ಕಾರ ನೀಡುತ್ತಿರುವುದರಿಂದ ಮಕ್ಕಳಲ್ಲಿ ಶರಣ ಸಂಸ್ಕೃತಿ ಬೆಳೆಸುತ್ತಿರುವುದು ಶ್ಲಾಘನೀಯ ಎಂದರು.


ಎಸ್.ಸಿ. ಬಡ್ನಿ ಮಾತನಾಡಿ, ಪ್ರಾಥಮಿಕ ಹಂತದಲ್ಲಿ ಮಕ್ಕಳು ಕನ್ನಡ ಮಾಧ್ಯಮದಲ್ಲಿ ಕಲಿಯುವುದರಿಂದ ಸಾಕಷ್ಟು ಸಾಧನೆ ಮಾಡಬಹುದು. ಬಿ.ಸಿ. ಬಂಗಾರಿ ಶಾಲೆಯಲ್ಲಿ ನಿತ್ಯ ಮಕ್ಕಳಲ್ಲಿ ಶರಣ ಸಂಸ್ಕೃತಿ ಬಿತ್ತುತ್ತಿದ್ದೇವೆ. ಇದರಿಂದ ಮುಂದಿನ ಪೀಳಿಗೆಗೆ ನಾವೆಲ್ಲರೂ ಸಂಸ್ಕಾರಯುತ ಬದುಕು ಕಟ್ಟಿಕೊಳ್ಳಲು ಸಾಧ್ಯವಾಗುತ್ತದೆ ಎಂದರು.

ಅಧ್ಯಕ್ಷತೆಯನ್ನು ಎಸ್.ಸಿ. ಬಡ್ನಿ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಷಣ್ಮುಖ ಶಿರಹಟ್ಟಿ, ಡಾ. ಎಸ್.ಸಿ. ಚವಡಿ, ಮುಖ್ಯಾಧ್ಯಾಪಕಿ ವಾಯ್. ಎಸ್. ಶಂಕಿನ, ಎ.ಎಸ್. ಬೇಲೇರಿ, ಪರಶುರಾಮ ವಂಟಕರ, ಸಂಜಯ ನೀಲಗುಂದ, ಶಿವಬಸವ ಹಸಬಿ, ಮಾಹಾಂತೇಶ ಕೋರಿ, ಹೊನ್ನಪ್ಪ ನೀಲಗುಂದ, ಬಸವರಾಜ ಬಾತಾಖಾನಿ, ಹರ್ಷಾಲಾ ದೇಶಪಾಂಡೆ, ಅನ್ನಪೂರ್ಣಾ ಬಡ್ನಿ, ಮಂಜುಳಾ ಬಂಗಾರಿ ಇದ್ದರು.

# ಸಚಿವರ ಭಾಷಣಕ್ಕೆ ವಿರೋಧ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಕಾನೂನು, ಸಂಸದೀಯ ಮತ್ತು ಪ್ರವಾಸೋದ್ಯಮ ಸಚಿವರಾದ ಎಚ್.ಕೆ. ಪಾಟೀಲರು ಗಣರಾಜ್ಯೋತ್ಸವ ಕಾರ್ಯಕ್ರಮದ ತಮ್ಮ ಭಾಷಣದಲ್ಲಿ ಕೇಂದ್ರ ಸರ್ಕಾರದ ಯೋಜನೆಯಾದ ವಿಬಿರಾಮ್‌ಜೀ ಬಗ್ಗೆ ವಿರೋಧಿಸಿ ಈ ಯೋಜನೆ ಬಡವರ ಪರವಾಗಿಲ್ಲ ಎಂದು ಹೇಳಿದ್ದು ದುರ್ದೈವದ ಸಂಗತಿ. ಈ ಕಾಂಗ್ರೆಸ್ ಪಕ್ಷದ ಭಾಷಣವನ್ನು ವಿರೋಧಿಸಿದ ವಿಧಾನ ಪರಿಷತ್ ಸದಸ್ಯ ಎಸ್.ವ್ಹಿ. ಸಂಕನೂರರ ನಡೆ ಸ್ವಾಗತಾರ್ಹ ಎಂದು ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ (ರಾಜು) ಕುರುಡಗಿ ಹೇಳಿದ್ದಾರೆ.



ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ವಿಬಿರಾಮ್‌ಜೀ ಯೋಜನೆಯ ಮಹತ್ವವನ್ನು ತಿಳಿಯದ ಎಚ್.ಕೆ. ಪಾಟೀಲರು ಕಾನೂನು ಸಚಿವರಾಗಲು ಸೂಕ್ತವಲ್ಲ.

ಕೇಂದ್ರ ಸರ್ಕಾರ ಈ ಯೋಜನೆಯಲ್ಲಿ ಬಡ ಕೂಲಿಕಾರ್ಮಿಕರಿಗೆ 7 ದಿನಕ್ಕೊಮ್ಮೆ ಕಡ್ಡಾಯವಾಗಿ ಸಂಬಳ ನೀಡಬೇಕು ಹಾಗೂ ಸಂಬಳ ನೀಡಲು ತಡವಾದರೆ ಅದಕ್ಕೆ ಪರಿಹಾರ ನೀಡಬೇಕು.

ದೇಶದ ಹೆಮ್ಮೆಯ ಪ್ರಧಾನಿ ನರೇಂದ್ರ ಮೋದಿಯವರು ರೈತರ, ಕಾರ್ಮಿಕರ ಪರವಾದ ಕಾನೂನು ಮಾಡಿ ಕೇಂದ್ರ ಸರ್ಕಾರ ಜಾರಿ ಮಾಡಿದ ಈ ಯೋಜನೆಯನ್ನು ವಿರೋಧಿಸುತ್ತಿರುವುದು ಹಾಸ್ಯಾಸ್ಪದ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

## ಯುಸಿಸಿಯಲ್ಲಿ 18 ಬದಲಾವಣೆ ಮಾಡಿದ ಉತ್ತರಾಖಂಡ್ ಸರ್ಕಾರ; ಸುಗ್ರೀವಾಜ್ಞೆ ಮೂಲಕ ತಿದ್ದುಪಡಿ ಜಾರಿಗೆ

■ವಿಜಯಸಾಕ್ಷಿ ಸುದ್ದಿ, ಉತ್ತರಾಖಂಡ್

ವಿವಾಹ, ವಿಚ್ಛೇದನ, ಲಿವ್-ಇನ್ ಸಂಬಂಧಗಳು ಮತ್ತು ಉತ್ತರಾಧಿಕಾರಕ್ಕೆ ಸಂಬಂಧಿಸಿದ ನಿಯಮಗಳನ್ನು ಬಿಗಿಗೊಳಿಸುವ ಗುರಿಯನ್ನು ಹೊಂದಿರುವ ಸುಮಾರು ಹದಿನೆಂಟು ಬದಲಾವಣೆಗಳನ್ನು ಪರಿಚಯಿಸುವ ಮೂಲಕ ಏಕರೂಪ ನಾಗರಿಕ ಸಂಹಿತೆಯ ಹಲವಾರು ನಿಬಂಧನೆಗಳನ್ನು ಮಾರ್ಪಡಿಸಲು ಉತ್ತರಾಖಂಡ ಸರ್ಕಾರ ಸೋಮವಾರ ತಿದ್ದುಪಡಿ ಸುಗ್ರೀವಾಜ್ಞೆಯನ್ನು ಜಾರಿಗೆ ತಂದಿದೆ. ತಿದ್ದುಪಡಿಗಳಲ್ಲಿ ಬಲವಂತ, ವಂಚನೆ ಮತ್ತು ವೈಯಕ್ತಿಕ ಸಂಬಂಧಗಳಲ್ಲಿ ತಪ್ಪು ಪ್ರಾತಿನಿಧ್ಯಕ್ಕೆ ಕಠಿಣ ದಂಡಗಳು ಸೇರಿವೆ.

ಉತ್ತರಾಖಂಡ ಏಕರೂಪ ನಾಗರಿಕ ಸಂಹಿತೆ ತಿದ್ದುಪಡಿ ಸುಗ್ರೀವಾಜ್ಞೆ 2026 ನಿವೃತ್ತ ಗವರ್ನರ್ ಲೆಫ್ಟಿನೆಂಟ್ ಜನರಲ್ ಗುರ್ಮೀತ್ ಸಿಂಗ್ ಅವರ ಒಪ್ಪಿಗೆಯನ್ನು ಪಡೆದ ತಕ್ಷಣ ಜಾರಿಗೆ ಬಂದಿತು. ಈ ಹಿಂದೆ ಜಾರಿಗೊಳಿಸಲಾಗಿದ್ದ ಉತ್ತರಾಖಂಡ ಏಕರೂಪ ನಾಗರಿಕ ಸಂಹಿತೆ 2024 ರಲ್ಲಿನ ಅಂತರ ಮತ್ತು ಪ್ರಾಯೋಗಿಕ ಸವಾಲುಗಳನ್ನು ಪರಿಹರಿಸಲು ಈ ಸುಗ್ರೀವಾಜ್ಞೆಯನ್ನು ತರಲಾಗಿದೆ ಎಂದು ರಾಜ್ಯ ಸರ್ಕಾರ ಹೇಳಿದೆ.

ಆಡಳಿತಾತ್ಮಕ ದಕ್ಷತೆಯನ್ನು ಸುಧಾರಿಸುವ ಮತ್ತು ನಾಗರಿಕರ ಹಕ್ಕುಗಳ ರಕ್ಷಣೆಯನ್ನು ಬಲಪಡಿಸುವ ಜೊತೆಗೆ ಕಾನೂನನ್ನು ಸ್ಪಷ್ಟ, ಹೆಚ್ಚು ಪರಿಣಾಮಕಾರಿಯಾಗಿ ಕಾರ್ಯಗತಗೊಳಿಸಲು ಸುಲಭಗೊಳಿಸುವ ಉದ್ದೇಶವನ್ನು ತಿದ್ದುಪಡಿಗಳು ಹೊಂದಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

# ಲಕ್ಕುಂಡಿಯಲ್ಲಿ ಗಣರಾಜ್ಯೋತ್ಸವದ ಸಂಭ್ರಮ



■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

77ನೇ ಗಣರಾಜ್ಯೋತ್ಸವವವನ್ನು ಇಲ್ಲಿಯ ವಿವಿಧ ಸಂಘ-ಸಂಸ್ಥೆಗಳಲ್ಲಿ, ಶಾಲಾ-ಕಾಲೇಜುಗಳಲ್ಲಿ ಸಡಗರ ಸಂಭ್ರಮದಿಂದ ಆಚರಿಸಲಾಯಿತು.

ಇಲ್ಲಿಯ ಗ್ರಾಮ ಪಂಚಾಯಿತಿ ಆವರಣದಲ್ಲಿ 77ನೇ ಗಣರಾಜ್ಯೋತ್ಸವದ ಧ್ವಜಾರೋಹಣವನ್ನು ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ ನೆರವೇರಿಸಿದರು. ಇದಕ್ಕೂ ಪೂರ್ವ ಮಹಾತ್ಮ ಗಾಂಧೀಜಿ ಮತ್ತು ಡಾ. ಬಿ.ಆರ್. ಅಂಬೇಡ್ಕರರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಲಾಯಿತು. ಮಕ್ಕಳು ಸಂವಿಧಾನ ಪೀಠಿಕೆಯನ್ನು ಓದಿ ಪ್ರತಿಜ್ಞಾ ವಿಧಿ ಸ್ವೀಕರಿಸಿದರು. ನಂತರ ವಿವಿಧ ಶಾಲೆಯ ಮಕ್ಕಳಿಂದ ದೇಶ ಭಕ್ತಿಯ ಗೀತೆಯ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ಈ ಸಂದರ್ಭದಲ್ಲಿ ಮಾತನಾಡಿದ ಗ್ರಾಂ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ, ಡಾ. ಬಿ.ಆರ್. ಅಂಬೇಡ್ಕರರು ಈ ದೇಶಕ್ಕೆ ನೀಡಿದ ಸಂವಿಧಾನದಿಂದ ಎಲ್ಲ ಕ್ಷೇತ್ರಗಳಲ್ಲಿ ಸಮಾನವಾದ, ಅಧಿಕಾರ, ಉದ್ಯೋಗ, ಮೂಲಭೂತ ಸೌಲಭ್ಯಗಳು ದೊರೆತಿದ್ದು, ಎಲ್ಲರೂ ಸಂವಿಧಾನವನ್ನು ಗೌರವಿಸಬೇಕು ಎಂದರು.

ಗ್ರಾ.ಪಂ ಉಪಾಧ್ಯಕ್ಷೆ ಪುಷ್ಪಾ ಪಾಟೀಲ, ಗ್ರಾ.ಪಂ ಸದಸ್ಯರು, ಪಿ.ಡಿ.ಒ ಅಮೀರಾನಾಯಕ, ಕಾರ್ಯದರ್ಶಿ ಎಂ.ಎ. ಗಾಜಿ ಸಿಬ್ಬಂದಿ ಹಾಜರಿದ್ದರು.

ಸರಕಾರಿ ಬಾಲಕಿಯರ ಪ್ರೌಢಶಾಲೆ, ಸರಕಾರಿ ಮಾದರಿಯ ದ್ವಿಭಾಷಾ ಪ್ರಾಥಮಿಕ ಶಾಲೆ, ಕೆ.ಜಿ.ಎಸ್ ಸರಕಾರಿ ಉರ್ದು ಶಾಲೆ, ಸರಕಾರಿ ಕಿರಿಯ ಪ್ರಾಥಮಿಕ ಶಾಲೆ, ಬಾಪೂಜಿ ಕಿರಿಯ ಪ್ರಾಥಮಿಕ ಶಾಲೆ, ಸರಕಾರಿ ಪ್ರಾಥಮಿಕ ಡಿ.ಪಿ.ಇ.ಪಿ ಶಾಲೆ, ಸ್ವಾಮಿ ವಿವೇಕಾನಂದ ಪ್ರಾಥಮಿಕ ಶಾಲೆ, ಜನತಾ ವಿದ್ಯಾವರ್ಧಕ ಸಂಸ್ಥೆ, ಬಿ.ಎಚ್. ಪಾಟೀಲ ಸಂಯುಕ್ತ ಪದವಿಪೂರ್ವ ಕಾಲೇಜು, ವಿವಿಧ ಅಂಗನವಾಡಿ ಕೇಂದ್ರಗಳು, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ 1, 2 3, ಲಕ್ಷ್ಮೀ ನಾರಾಯಣ ಸೌಹಾರ್ದ ಸಹಕಾರಿ ಸಂಘ ಸೇರಿದಂತೆ ವಿವಿಧ ಸಂಘಗಳಲ್ಲಿ ಗಣರಾಜ್ಯೋತ್ಸವವನ್ನು ಆಚರಿಸಲಾಯಿತು.

ಗ್ರಾಮ ಪಂಚಾಯಿತಿ ಆವರಣದಲ್ಲಿ ನಡೆದ ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಸರಕಾರಿ ಮಾದರಿ ದ್ವಿಭಾಷಾ (ಆಂಗ್ಲ) ಪ್ರಾಥಮಿಕ ಶಾಲೆಯ 1ನೇ ತರಗತಿ ವಿದ್ಯಾರ್ಥಿ ಸಾಹಿತ್ಯ ನಂದಪ್ಪನವರ ಸಂವಿಧಾನ ಪೀಠಿಕೆಯನ್ನು ನಿರ್ಗಳವಾಗಿ ಇಂಗ್ಲೀಷ್‌ನಲ್ಲಿ ಹೇಳಿದ್ದು ಎಲ್ಲರ ಗಮನ ಸೆಳೆಯಿತು.

# ವಿಜ್ರಂಭಣೆಯ ಶ್ರೀ ಬೀರಲಿಂಗೇಶ್ವರ ಜಾತ್ರೆ

■ವಿಜಯಸಾಕ್ಷಿ ಸುದ್ದಿ, ಗದಗ

ಸಮೀಪದ ತಿಮ್ಮಾಪೂರ ಗ್ರಾಮದಲ್ಲಿ ಶ್ರೀ ಬೀರಲಿಂಗೇಶ್ವರ ಜಾತ್ರಾ ಮಹೋತ್ಸವ ವಿಜ್ರಂಭಣೆಯಿಂದ ನಡೆಯಿತು. ಬೆಳಿಗ್ಗೆ ಶ್ರೀದೇವರಿಗೆ ಪಂಚಾಮೃತ ಅಭಿಷೇಕ ಹಾಗೂ ಅನೇಕ ಪೂಜಾ ಕೈಂಕರ್ಯಗಳು ನಡೆದವು.

ಬೆಳಿಗ್ಗೆ 10 ಗಂಟೆಗೆ ಸಕಲ ಮಂಗಳ ವಾದ್ಯಗಳೊಂದಿಗೆ ಪಲ್ಲಕ್ಕಿಯಲ್ಲಿ ದೇವರನ್ನು ಕೂರಿಸಿ ಗಂಗಾ ಪೂಜೆ ಸಲ್ಲಿಸಿ ಗ್ರಾಮದ ಪ್ರಮುಖ ಬೀದಿಗಳಲ್ಲಿ ಪಲ್ಲಕ್ಕಿ ಉತ್ಸವದ ಮೂಲಕ ಸಂಚರಿಸಿ ಗುಡಿಯನ್ನು ತಲುಪಿತು.

ಮಧ್ಯಾಹ್ನ ಮಹಾ ದಾಸೋಹದಲ್ಲಿ ನೂರಾರು ಭಕ್ತರು ಪ್ರಸಾದವನ್ನು ಸ್ವೀಕರಿಸಿದರು.



ರಾತ್ರಿ ಶಾಲಾ ಮಕ್ಕಳಿಂದ ಜಾನಪದ ರಸಮಂಜರಿ ಕಾರ್ಯಕ್ರಮವನ್ನು ಉದ್ಘಾಟಿಸಲಾಯಿತು. ಮುಖ್ಯ ಅತಿಥಿಯಾಗಿ ಪಾಲ್ಗೊಂಡಿದ್ದ ಕರ್ನಾಟಕ ರಾಜ್ಯ ರೈತ ಸಂಘದ ಗದಗ ಜಿಲ್ಲಾಧ್ಯಕ್ಷ ಯಲ್ಲಪ್ಪ ಎಚ್.ಬಾಬರಿ ಅವರು ದೇವಸ್ಥಾನಕ್ಕೆ ದೇಣಿಗೆ ನೀಡಿದ ದಾನಿಗಳಾದ ರಾಮಣ್ಣ ಕಂಕರಿ, ಮಾದೇವಪ್ಪ ಇದ್ಲಿ ಹನುಮಪ್ಪ ದೇವರವರ, ಶ್ರೀಕಾಂತ ಸೋಂಟಿ ರಾಮಣ್ಣ ಡಂಬಳ ನಾಗಪ್ಪ ಆಲೂರು, ಶರಣಪ್ಪ ಗಾಜಿ ಇವರನ್ನು ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಬೀರಲಿಂಗೇಶ್ವರ ಜಾತ್ರಾ ಕಮಿಟಿ ಸದಸ್ಯರಾದ ರಮೇಶ ಬನಾಪೂರ, ಬಸಪ್ಪ ದೇವರವರ, ಶಿವಾನಂದ ಡಂಬಳ, ಚಂದ್ರು ಆಲೂರ, ಹನುಮಪ್ಪ ಬಿಚಗಲ್ಲ, ಮಾರುತಿ ಕಟಗಿ, ಬಸವರಾಜ ಇದ್ಲಿ, ಮಂಜುನಾಥ ಕೊಪ್ಪಳ, ಶ್ರೀಕಾಂತ ಬಾಬರಿ, ಮಾರುತಿ ಹಚ್ಚಪ್ಪನವರ, ಬೀರಪ್ಪ, ಬಂಡಿಹಾಳ, ಮಲ್ಲಪ್ಪ ಡಂಬಳ, ಬೀರಪ್ಪ ಬನಾಪೂರ, ಪ್ರಕಾಶ ಯತ್ನಟ್ಟಿ ಮುಂತಾದವರಿದ್ದರು.

# ಸಂಗೊಳ್ಳಿ ರಾಯಣ್ಣನವರ ಬಲಿದಾನ ದಿನಾಚರಣೆ



■ವಿಜಯಸಾಕ್ಷಿ ಸುದ್ದಿ, ಗದಗ

ಕ್ರಾಂತಿವೀರ ಸಂಗೊಳ್ಳಿ ರಾಯಣ್ಣನವರ ಬಲಿದಾನ ದಿನಾಚರಣೆ ಮತ್ತು 77ನೇ ಗಣರಾಜ್ಯೋತ್ಸವ ಆಚರಣೆಯನ್ನು ನಗರದ ಸಂಗೊಳ್ಳಿ ರಾಯಣ್ಣನವರ ವೃತ್ತದಲ್ಲಿರುವ ಮೂರ್ತಿಗೆ ವಿಶೇಷ ಪೂಜೆ ಸಲ್ಲಿಸಿ ಮೂಲಕ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಹಾಲುಮತ ಮಹಾಸಭಾದ ರಾಜ್ಯಾಧ್ಯಕ್ಷ ರುದ್ರಣ್ಣ ಗುಳಗುಳಿ, ನಾಗರಾಜ ಮೆಣಸಗಿ, ಸೋಮನಗೌಡ ಪಾಟೀಲ, ಮುತ್ತು ಜಡಿ, ರವಿ ಜೋಗಿನ, ಹೇಮಂತ ಗಿಡ್ಡಹನುಮಣ್ಣವರ, ಸತೀಶ ಗಿಡ್ಡಹನುಮಣ್ಣವರ, ಆಲೂರು, ಮಂಜುನಾಥ ಜಡಿ, ರಾಘು ವಗ್ಗನವರ, ಕುಮಾರ ಮಾರನಬಸರಿ, ಬಸುವರಾಜ ಕುರಿ, ರವಿಚಂದ್ರ ಅಬ್ಬಿಗೇರಿ, ಮಲ್ಲೇಶ ಬಿಂಗಿ, ಸುರೇಶ ಹೆಬಸೂರ, ಡಿ.ಎಂ. ಕೆರೂರ, ಸೋಮು ಮೇಟಿ, ಸೋಮು ಬಿಂಗಿ, ಪರಶುರಾಮ ಜಡಿ, ಮಂಜುನಾಥ ಪೂಜಾರ, ಮಹೇಶ ಮದ್ನಾಳ ಮುಂತಾದವರು ಉಪಸ್ಥಿತರಿದ್ದರು.

**ಶಿವಾನುಭವ ಕಾರ್ಯಕ್ರಮದಲ್ಲಿ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು**

# ಶಿರಸಂಗಿ ಲಿಂಗರಾಜರು ಅಪ್ರತಿಮ ದಾನವೀರರು

■ವಿಜಯಸಾಕ್ಷಿ ಸುದ್ದಿ, ಗದಗ

ಲಿಂಗರಾಜ ದೇಸಾಯಿಯವರ ತ್ಯಾಗ, ದಾನಗುಣ ಮತ್ತು ಜೀವನಾದರ್ಶಗಳು ಸ್ಮರಣೀಯವಾದದ್ದು. ಕನ್ನಡ ನಾಡು ಕಂಡ ಅಪ್ರತಿಮ ದಾನವೀರರು ಶಿರಸಂಗಿ ಲಿಂಗರಾಜರು ಎಂದು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ನುಡಿದರು.

ಲಿಂಗಾಯತ ಪ್ರಗತಿಶೀಲ ಸಂಘದ 2781ನೇ ಶಿವಾನುಭವದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದ ಶ್ರೀಗಳು, ದೇಶದ ಅನೇಕ ಸಂಸ್ಥಾನಗಳಲ್ಲಿ ಶಿರಸಂಗಿ ಸಂಸ್ಥಾನವು ಬಹಳ ವಿಶಿಷ್ಟತೆಯಿಂದ ಗುರುತಿಸಿಕೊಂಡಿತ್ತು. ಅನೇಕ ಸಂಸ್ಥಾನಗಳು ಇದ್ದರೂ ಶಿರಸಂಗಿ ಸಂಸ್ಥಾನದ ಹೆಸರು ಇಂದು ಅಜರಾಮರವಾಗಿ ಉಳಿದಿದೆ. ಇದಕ್ಕೆ ಕಾರಣ ಲಿಂಗರಾಜರು ಬದುಕಿದ ನಿಸ್ವಾರ್ಥ ಸಾರ್ಥಕ ಬದುಕು. ಅವರು ಲಿಂಗಾಯತ ಸಮಾಜಕ್ಕೆ ಸರ್ವಸ್ವವನ್ನು ತ್ಯಾಗ ಮಾಡಿ, ಬಡಮಕ್ಕಳಿಗೆ ವಿದ್ಯಾದಾನ ಮಾಡಿದ್ದಾರೆ. ಲಿಂಗರಾಜ ಟ್ರಸ್ಟ್ ಸ್ಥಾಪಿಸಿ ಸಮಾಜಕ್ಕೆ ಸಾಕಷ್ಟು ಕೊಡುಗೆಯನ್ನು ನೀಡಿದ್ದಾರೆ.



ಕೆಎಲ್‌ಇ ಸಂಸ್ಥೆ ಬೆಳೆಯಲು ಲಿಂಗರಾಜ ಟ್ರಸ್ಟ್‌ನ ಪಾತ್ರ ಹಿರಿದಾದುದು ಎಂದರು.

ಉಪನ್ಯಾಸಕರಾಗಿ ಆಗಮಿಸಿದ್ದ ನಿವೃತ್ತ ಪ್ರಾಧ್ಯಾಪಕ ಪ್ರೊ. ಶಿವಾನಂದ ಹೊಂಬಳ ಮಾತನಾಡಿ, ಶಿರಸಂಗಿ ಲಿಂಗರಾಜರು ಮಹಾನ್ ತ್ಯಾಗಜೀವಿಗಳು. ಒಂದು ಸಲ ತಮ್ಮದೇ ಮಾವಿನ ತೋಟದಲ್ಲಿ ಕೂತಾಗ ಒಬ್ಬ ಬಡ ಹುಡುಗ ಹಣ್ಣು ತಿನ್ನುವ ಆಸೆಯಿಂದ ಗಿಡಕ್ಕೆ ಕಲ್ಲು ಹೊಡೆದ. ಅದು ತಪ್ಪಿ ಲಿಂಗರಾಜರಿಗೆ ಬಿತ್ತು. ಹುಡುಗ ಓಡಿ ಹೋದ. ಆದರೆ ಲಿಂಗಾರಾಜರು ಆ ಹುಡುಗನ ಮನೆಯನ್ನು ಹುಡುಕಿಕೊಂಡು ಹೋಗಿ ಅವನ ತಂದೆಗೆ ಹೇಳಿದರು. ಹೆದರಿ ತಪ್ಪಾಯ್ತು ಎಂದು ಬೇಡಿಕೊಂಡರು. ಆದರೆ ಲಿಂಗರಾಜ ದೇಸಾಯಿಯವರು ಆ ಹುಡುಗ ಒಗೆದ ಕಲ್ಲಿನಿಂದ ಹೊಡೆಸಿಕೊಂಡ ಗಿಡ ಹಣ್ಣು ಕೊಡುತ್ತದೆ. ಆದರೆ ಕಲ್ಲು ನನಗೆ ಬಿದ್ದಿದೆ. ನಾನು ಮಾವಿನ ತೋಟವನ್ನೆ ನಿಮಗೆ ದಾನವಾಗಿ ಕೊಡುತ್ತೇನೆ ಎಂದು ಲಿಂಗರಾಜರು ಹೇಳಿದರು. ಲಿಂಗರಾಜರು ಎಂಥಹ ದಾನಶೂರರು ಇದ್ದರು ಎಂದು ಗೊತ್ತಾಗುತ್ತದೆ. ಗದಗ ಜಿಲ್ಲೆಯ ಶಿಗ್ಲಿಯಲ್ಲಿ ಜನಿಸಿ ಶಿರಸಂಗಿ ಸಂಸ್ಥಾನದ ರಾಜನಾಗಿ ಮೆರೆದ ಲಿಂಗರಾಜರ ಬದುಕು ಅಜರಾಮರವಾಗಿದೆ ಎಂದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ಪ್ರಭಾಕರ ಉಳ್ಳಾಗಡ್ಡಿ, ವಿನಾಯಕ ಆಸಂಗಿ ಮಾತನಾಡಿದರು. ಮಾತೋಶ್ರೀ ಜಯಶ್ರೀ ಹಳ್ಳಿಕೇರಿಯವರು ದಾಸೋಹ ಸೇವೆಗೆ ದತ್ತಿನಿಧಿಯಾಗಿ 1 ಲಕ್ಷ ರೂಪಾಯಿಯ ಚೆಕ್ ನೀಡಿದರು. ಇದೇ ಸಂದರ್ಭದಲ್ಲಿ ವೀರಪ್ಪ ಬಿಸನಳ್ಳಿ ಹಾಗೂ ಮಹೇಂದ್ರ ಕುರುಡಿ ಅವರನ್ನು ಸನ್ಮಾನಿಸಲಾಯಿತು. ಸಂಗೀತ ಸೇವೆಯನ್ನು ಅನ್ನಪೂರ್ಣ ಹುಬ್ಬಳ್ಳಿ ನಡೆಸಿಕೊಟ್ಟರು. ವಚನಸಂಗೀತವನ್ನು ಮೃತ್ಯುಂಜಯ ಹಿರೇಮಠ ಹಾಗೂ ಗುರುನಾಥ್ ಸುತಾರ ನಡೆಸಿದರು. ಧರ್ಮಗ್ರಂಥ ಪಠಣವನ್ನು ಶ್ರೇಯಾ ಭರಮಪ್ಪ ಗುಡಿ ಹಾಗೂ ವಚನಚಿಂತನವನ್ನು ಶಿವರಾಜ ಭರಮಪ್ಪ ಗುಡಿ ನಡೆಸಿದರು.

ದಾಸೋಹ ಸೇವೆಯನ್ನು ಶಿರೋಳ ತೋಂಟದಾರ್ಯ ಜಾತ್ರಾ ಸಮಿತಿ 2026ರ ಅಧ್ಯಕ್ಷರು–ಸರ್ವಪದಾಧಿಕಾರಿಗಳು ಹಾಗೂ ಅಧ್ಯಕ್ಷರು–ಪದಾಧಿಕಾರಿಗಳು ಅಖಿಲ ಕರ್ನಾಟಕ ಕುಡವಕ್ಕಲಿಗರ ಸಂಘ ಗದಗ ಮತ್ತು ಸತೀಶ್ ಆಸಂಗಿ, ನೇಹಾ ಆಸಂಗಿ ವಹಿಸಿಕೊಂಡಿದ್ದರು. ಚಂದ್ರಶೇಖರಯ್ಯ ಮಹದೇವಯ್ಯ ಧನ್ನೂರು ಹಿರೇಮಠ ಇವರ ಸ್ಮರಣಾರ್ಥ 1 ಲಕ್ಷ ಠೇವಣಿ ಪ್ರಮಾಣಪತ್ರವನ್ನು ಕುಟುಂಬ ವರ್ಗದವರಾದ ಚೇತನ ವೀರಭದ್ರಯ್ಯ ಧನ್ನೂರಹಿರೇಮಠ ಅವರು ಶ್ರೀಗಳಿಗೆ ನೀಡಿದರು.

ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಬಾಲಚಂದ್ರ ಭರಮಗೌಡ್ರ, ಉಪಾಧ್ಯಕ್ಷ ಡಾ. ಉಮೇಶ ಪುರದ, ವಿದ್ಯಾ ಪ್ರಭು ಗಂಜಿಹಾಳ, ಕಾರ್ಯದರ್ಶಿ ವೀರಣ್ಣ ಗೋಟಡಕಿ, ಸಹಕಾರ್ಯದರ್ಶಿ ಸೋಮಶೇಖರ ಪುರಾಣಿಕ, ನಾಗರಾಜ್ ಹಿರೇಮಠ, ಸಂಘಟನಾ ಕಾರ್ಯದರ್ಶಿ ಮಹೇಶ್ ಗಾಣಿಗೇರ, ಕೋಶಾಧ್ಯಕ್ಷ ಬಸವರಾಜ ಕಾಡಪ್ಪನವರ, ಶಿವಾನುಭವ ಸಮಿತಿಯ ಸಹ ಚೇರಮನ್ ಶಿವಾನಂದ ಹೊಂಬಳ ಹಾಗೂ ಮಠದ ಭಕ್ತರು ಉಪಸ್ಥಿತರಿದ್ದರು. ಶಿವಾನುಭವ ಸಮಿತಿಯ ಚೇರಮನ್ ಐ.ಬಿ. ಬೆನಕೊಪ್ಪ ಸ್ವಾಗತಿಸಿದರು. ವಿದ್ಯಾಪ್ರಭು ಗಂಜಿಹಾಳ ಕಾರ್ಯಕ್ರಮ ನಿರೂಪಿಸಿದರು.

> ಸಮ್ಮುಖ ವಹಿಸಿದ್ದ ಬೈರನಟ್ಟಿ ಪೂಜ್ಯ ಶಾಂತಲಿಂಗ ಮಹಾಸ್ವಾಮಿಗಳು ಮಾತನಾಡಿ, ಕಳಸಾಬಂಡೂರಿ ಯೋಜನೆಯ ಕರ್ತೃತ್ವ ಶಕ್ತಿ ಶಿರಸಂಗಿ ಲಿಂಗರಾಜರು. ಅಂದು ಅವರು ನೀಡಿದ ಸಲಹೆ ಇಂದು ಮುಂಚೂಣಿಗೆ ಬಂದಿದೆ. ಶಿರಸಂಗಿ ಲಿಂಗರಾಜರು ಕೃಷಿಗೆ, ನೀರಾವರಿಗೆ ತುಂಬಾ ಮಹತ್ವವನ್ನು ಕೊಟ್ಟಿದ್ದರು. ಸಮಾಜದಲ್ಲಿನ ಅನಿಷ್ಟ ಪದ್ಧತಿಗಳನ್ನು ಹೊಡೆದೋಡಿಸಲು ಹೋರಾಡಿದವರು ಎಂದರು.

# ಪರಾಕ್ರಮ ದಿನ ಆಚರಣೆ




■ವಿಜಯಸಾಕ್ಷಿ ಸುದ್ದಿ, ಗದಗ

ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ, ರಾಷ್ಟ್ರೀಯ ಸೇವಾ ಯೋಜನೆ (ಓಖಖ) ಹಾಗೂ ಮೇರಾ ಯುವ ಭಾರತ್ ಗದಗ ಇವರ ಸಂಯುಕ್ತಾಶ್ರಯದಲ್ಲಿ ನೇತಾಜಿ ಸುಭಾಷ್‌ಚಂದ್ರ ಬೋಸ್ ಜಯಂತಿ ಹಾಗೂ ಪರಾಕ್ರಮ ದಿನವನ್ನು ವಿಶ್ವವಿದ್ಯಾಲಯದ ಕೌಶಲ್ಯ ವಿಕಾಸ ಭವನದ ಸಭಾಂಗಣದಲ್ಲಿ ಆಚರಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಿಶ್ವವಿದ್ಯಾಲಯದ ಮಾನ್ಯ ಕುಲಪತಿ ಪ್ರೊ. ಡಾ. ಸುರೇಶ್ ವಿ.ನಾಡಗೌಡರ ವಹಿಸಿ ಮಾತನಾಡಿ, ನೇತಾಜಿ ಸುಭಾಷ್‌ಚಂದ್ರ ಬೋಸ್ ಅವರ ದೇಶಭಕ್ತಿ, ಶೌರ್ಯ, ತ್ಯಾಗ ಮತ್ತು ನಾಯಕತ್ವ ಗುಣಗಳು ಇಂದಿನ ಯುವ ಪೀಳಿಗೆಗೆ ಪ್ರೇರಣೆಯ ದೀಪವಾಗಿವೆ. "Give me blood, and I shall give you freedom" ಎಂಬ ಅವರ ಘೋಷಣೆ ಭಾರತೀಯ ಸ್ವಾತಂತ್ರ್ಯ ಹೋರಾಟದ ಚೇತನವನ್ನು ಪ್ರತಿಬಿಂಬಿಸುತ್ತದೆ. ಯುವಕರು ರಾಷ್ಟ್ರ ನಿರ್ಮಾಣದಲ್ಲಿ ಸಕ್ರಿಯವಾಗಿ ತೊಡಗಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಮೇರಾ ಯುವ ಭಾರತ್ ಗದಗ ವಿಭಾಗ ಸಂಯೋಜಕರಾದ ವೀರೇಂದ್ರ ಗೌಡ ಪಾಟೀಲ ವಿಶೇಷ ಉಪನ್ಯಾಸ ನೀಡಿ, ನೇತಾಜಿಯ ಸೈನಿಕ ಶಿಸ್ತು, ಸಂಘಟನಾ ಸಾಮರ್ಥ್ಯ ಮತ್ತು ಆತ್ಮವಿಶ್ವಾಸ, ಸ್ವತಂತ್ರ ಭಾರತದ ನಿರ್ಮಾಣಕ್ಕೆ ಅವರು ನೀಡಿದ ಕೊಡುಗೆಯನ್ನು ವಿವರಿಸಿದರು.

ಈ ಸಂದರ್ಭದಲ್ಲಿ ರಾಷ್ಟ್ರೀಯ ಮತದಾರ ದಿನಾಚರಣೆ ಪ್ರಯುಕ್ತ ವಿದ್ಯಾರ್ಥಿಗಳು ಮತ್ತು ಸ್ವಯಂಸೇವಕರಿಗೆ ಮತದಾನದ ಪ್ರತಿಜ್ಞಾವಿಧಿಯನ್ನು ಬೋಧಿಸಲಾಯಿತು. ಕಾರ್ಯಕ್ರಮದಲ್ಲಿ ಶೈಕ್ಷಣಿಕ ಚಟುವಟಿಕೆಗಳ ವಿಶೇಷ ಅಧಿಕಾರಿಗಳಾದ ಎಂ.ಬಿ. ಚನ್ನಪ್ಪಗೌಡರ, ಮೇರಾ ಯುವ ಭಾರತ್ ಗದಗ ಕಾರ್ಯಕ್ರಮ ಸಂಯೋಜಕರಾದ ರವಿ ಹೊಂಬಾಳಿ, ವಿಶ್ವವಿದ್ಯಾಲಯದ ಎನ್‌ಎಸ್‌ಎಸ್ ಕಾರ್ಯಕ್ರಮ ಸಂಯೋಜನಾಧಿಕಾರಿ ಪ್ರಕಾಶ್ ಎಸ್.ಮಾಚೇನಹಳ್ಳಿ, ಎನ್‌ಎಸ್‌ಎಸ್ ಕಾರ್ಯಕ್ರಮಾಧಿಕಾರಿಗಳಾದ ಮೇಘಾ ದೊನಿ ಮತ್ತು ಅಭಿಷೇಕ್ ಎಚ್.ಇ ಉಪಸ್ಥಿತರಿದ್ದರು.

# ವಿಜ್ಞಾನ ವಸ್ತು ಪ್ರದರ್ಶನದಲ್ಲಿ ಸಾಧನೆ


■ವಿಜಯಸಾಕ್ಷಿ ಸುದ್ದಿ, ಧಾರವಾಡ

ಇತ್ತೀಚೆಗೆ ತೆಲಂಗಾಣ ರಾಜ್ಯದ ಹೈದರಾಬಾದ್‌ನಲ್ಲಿ ಜರುಗಿದ ದಕ್ಷಿಣ ಭಾರತ ವಿಜ್ಞಾನ ವಸ್ತುಪ್ರದರ್ಶನದಲ್ಲಿ ಭಾಗವಹಿಸಿ ವಿಜೇತರಾಗಿ ಧಾರವಾಡ ಜಿಲ್ಲೆಯ ಕೀರ್ತಿಯನ್ನು ಹೆಚ್ಚಿಸಿರುವ ವಿದ್ಯಾರ್ಥಿ ಹಾಗೂ ಮಾರ್ಗದರ್ಶಿ ಶಿಕ್ಷಕರುಗಳನ್ನು ಆರ್.ಎನ್. ಶೆಟ್ಟಿ ಕ್ರೀಡಾಂಗಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಕಾರ್ಮಿಕ ಸಚಿವರು ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಲಾಡ್ ಸನ್ಮಾನಿಸಿದರು.

ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲರ ಘನ ಉಪಸ್ಥಿತಿಯಲ್ಲಿ, ಉಪನಿರ್ದೇಶಕರು (ಆಡಳಿತ) ಎಸ್.ಎಸ್. ಕೆಳದಿಮಠ, ಉಪನಿರ್ದೇಶಕರು (ಅಭಿವೃದ್ಧಿ) ಬಸವರಾಜ ನಾಲತವಾಡ, ಧಾರವಾಡ (ಗ್ರಾ) ಕ್ಷೇತ್ರ ಶಿಕ್ಷಣಾಧಿಕಾರಿ ರಾಮಕೃಷ್ಣ ಸದಲಗಿ, ಡಯಟ್ ಹಿರಿಯ ಉಪನ್ಯಾಸಕ ದೀಪಕ ಕುಲಕರ್ಣಿ, ವಾರ್ತಾ ಮತ್ತು ಪ್ರಚಾರ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

ಹುಬ್ಬಳ್ಳಿ ತಾಲೂಕಿನ ಎಸ್. ಆರ್. ಬೊಮ್ಮಾಯಿ ಸರಕಾರಿ ಪ್ರೌಢಶಾಲೆ ಗುಂಪು ವಿಭಾಗದಲ್ಲಿ ಆಟೋಮೆಟಿಕ್ ಇಂಜಿನ್ ಲಾಕ್ ಸಿಸ್ಟಮ್ ವಿಷಯದಲ್ಲಿ 9ನೇ ತರಗತಿ ವಿದ್ಯಾರ್ಥಿಗಳಾದ ಶಂಕರ್ ಹೂಗಾರ್ ಮತ್ತು ನವೀನ್ ನಾಯಕ್ ವಿಜೇತರಾಗಿದ್ದಾರೆ. ಇವರಿಗೆ ಶಿಕ್ಷಕ ಎಸ್.ಬಿ. ಭಾವಿಕಟ್ಟಿ ಮಾರ್ಗದರ್ಶನ ಮಾಡಿದ್ದರು. ಈ ಶಾಲೆಯ ವಿದ್ಯಾರ್ಥಿಗಳು ಕರ್ನಾಟಕ ಸೈನ್ಸ್ ಮತ್ತು ಟೆಕ್ನಾಲಜಿ ಪ್ರಮೋಷನ್ ಸೊಸೈಟಿ ಬೆಂಗಳೂರು ಇವರ ವತಿಯಿಂದಲೂ ವಿಶೇಷ ಬಹುಮಾನವನ್ನು ಪಡೆದಿದ್ದಾರೆ.

ಧಾರವಾಡದ ಪ್ರೆಸೆಂಟೇಷನ್ ಬಾಲಕಿಯರ ಪ್ರೌಢಶಾಲೆಯ ವೈಯಕ್ತಿಕ ವಿಭಾಗದಲ್ಲಿ ಸೆನ್ಸರ್ ಲೈಟ್ ಹೌಸ್ ವಿಷಯದಲ್ಲಿ 9ನೇ ತರಗತಿಯ ಆಫಶೀನ್ ರಾಹುತ್ ಕರ್ನಾಟಕ ರಾಜ್ಯದ ವಿಭಾಗದಲ್ಲಿ ಪ್ರಥಮ ಬಹುಮಾನವನ್ನು ಪಡೆದಿದ್ದಾರೆ. ಇವರಿಗೆ ಶಾಲೆಯ ಶಿಕ್ಷಕಿ ಸವಿತಾ ಶಿಗಾವಿ ಮಾರ್ಗದರ್ಶನ ಮಾಡಿದ್ದರು.



# ಶ್ರೀಮಾತೆ ಶಾರದಾ ದೇವಿ ಸ್ತ್ರೀತನದ ಶಕ್ತಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶ್ರೀಮಾತೆ ಶಾರದಾ ದೇವಿ ಎಂದ ಕೂಡಲೇ ಕಣ್ಮುಂದೆ ಹಾಯುವುದು ಅವರ ಪರಮಪವಿತ್ರವಾದ ಜೀವನ. ತಮ್ಮ ಆಧ್ಯಾತ್ಮಿಕ ಶಕ್ತಿ, ಸರಳ ಬದುಕಿನ ಮೂಲಕ ಗುರುಮಾತೆಯ ಸ್ಥಾನ ಪಡೆದವರು ಎಂದು ಕನ್ನಡ ಉಪನ್ಯಾಸಕಿ ರೇಶ್ಮಿ ಮೇಲಗಿರಿ ಅಭಿಪ್ರಾಯ ಪಟ್ಟರು.

ಅವರು ಪಟ್ಟಣದ ರಾಜರಾಜೇಶ್ವರಿ ಮಹಿಳಾ ಸಾಹಿತ್ಯ ಮತ್ತು ಸಾಂಸ್ಕೃತಿಕ ವೇದಿಕೆ ವತಿಯಿಂದ ಸೋಮವಾರ ಹಮ್ಮಿಕೊಂಡ ಶ್ರೀಮಾತೆ ಶಾರದಾದೇವಿ ಕುರಿತ ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡಿದರು.

ಮೂಢನಂಬಿಕೆ, ಹೆಣ್ಣುಮಕ್ಕಳ ಅಸಹಾಯಕತೆ, ಸ್ತ್ರೀಶೋಷಣೆ ನಡೆಯುತ್ತಿದ್ದ ಕಾಲದಲ್ಲಿ ಶಾರದಾ ದೇವಿ ಮೌನವಾಗಿಯೇ ಈ ಎಲ್ಲ ನಿರ್ಬಂಧಗಳನ್ನು ಎದುರಿಸಿ ಬೆಳೆದರು. ಶ್ರೀಮಾತೆ ಬಾಲ್ಯದಿಂದಲೂ ತಮ್ಮ ಸ್ತ್ರೀತನದೊಳಗಿನ ಶಕ್ತಿಯನ್ನು ಪ್ರದರ್ಶಿಸುತ್ತಲೇ ಬೆಳೆದವರು. ಅವರ ನಿತ್ಯ ಜೀವನದಲ್ಲಿ ಪೂಜೆ, ಜಪಕ್ಕಿಂತಲೂ ಹೆಚ್ಚಿನ ಮನ್ನಣೆ ಸೇವಾಕಾರ್ಯಗಳಿಗೆ ಮೀಸಲಾಗಿರುತ್ತಿತ್ತು. ವಾಸ್ತವದಲ್ಲಿ ರಾಮಕೃಷ್ಣ ಪರಮಹಂಸರ ಸಾಧನೆ ಪರಿಪೂರ್ಣಗೊಂಡದ್ದು ಶಾರದಾ ದೇವಿಯವರ ಸಹಕಾರದಿಂದಲೇ ಎಂದು ರಾಮಕೃಷ್ಣರೇ ಹೇಳಿಕೊಂಡಿದ್ದರಂತೆ. ಸ್ವಾಮಿ ವಿವೇಕಾನಂದರು ಶಾರದೇವಿಯವರನ್ನು ಮಾತೃಸ್ವರೂಪ ಸ್ಥಾನದಲ್ಲಿ ಕಾಣುತ್ತಿದ್ದರೆಂದು ಅಭಿಪ್ರಾಯಪಟ್ಟರು.

ನಿವೃತ್ತ ಶಿಕ್ಷಕಿ ಸಾವಿತ್ರಿಬಾಯಿ ನೇಕಾರ ಅಧ್ಯಕ್ಷತೆ ವಹಿಸಿದ್ದರು. ಅತಿಥಿಗಳಾಗಿ ಪಾರ್ವತಿ ಪಾಟೀಲ, ಅನ್ನಪೂರ್ಣ ಓದುನವರ, ಗಾಯತ್ರಿ ಓದುನವರ ಆಗಮಿಸಿದ್ದರು. ಇದೇ ಸಂದರ್ಭದಲ್ಲಿ ರಾಜ್ಯಮಟ್ಟದ ಚೈತನ್ಯಶ್ರೀ ಪ್ರಶಸ್ತಿ ಪುರಸ್ಕೃತರಾದ ನಿರ್ಮಲಾ ಅರಳಿ ಅವರನ್ನು ಗೌರವಿಸಿ ಸನ್ಮಾನಿಸಲಾಯಿತು. ಸಮಾರಂಭದಲ್ಲಿ ವೇದಿಕೆಯ ಅಧ್ಯಕ್ಷೆ, ಸಾಹಿತಿ ಲಲಿತಾ ಕೆರಿಮನಿ, ಪ್ರತಿಮಾ ಮಹಾಜನಶೆಟ್ಟರ್, ಲತಾ ತಟ್ಟಿ, ಶಾಂತಾ ಅಬ್ಬಿಗೇರಿ, ಕಾಂಚನಮಾಲಾ ಹಸರೆಡ್ಡಿ, ನೀಲಕ್ಕ ಬೂದಿಹಾಳ, ಲಲಿತಾ ಲಮಾಣಿ, ಅರುಂಧತಿ ಬಿಂಕದಕಟ್ಟಿ, ಜಯಶ್ರೀ ಮತ್ತಿಕಟ್ಟಿ, ವೀಣಾ ಕುಂಬಿ, ಅಶ್ವಿನಿ ಅಂಕಲಕೋಟಿ, ದೇವಕ್ಕ ಕೊಡ್ಲಿವಾಡ, ರತ್ನಾ ಕರ್ಕಿ, ಶಾರದಾ ಮಹಾಂತಶೆಟ್ಟರ ಮುಂತಾದವರಿದ್ದರು. ಶೈಲಾ ಬಿಂಕದಕಟ್ಟಿ, ಶೋಭಾ ಗಾಂಜಿ, ಮಹಾನಂದಾ ಕೊಣ್ಣೂರ ನಿರೂಪಿಸಿದರು.

# ನೌಕರರ ಸಂಘದ ವಾರ್ಷಿಕ ಮಹಾಸಭೆ


■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ತಾಲೂಕು ಶಾಖೆಯ 2024–25ನೇ ಸಾಲಿನ ವಾರ್ಷಿಕ ಮಹಾಸಭೆ ಹಾಗೂ ಎನ್‌ಎಂಎಂಎಸ್ ಉಚಿತ ತರಬೇತಿ ಸಮಾರೋಪ ಸಮಾರಂಭವು ಸೋಮವಾರ ಪಟ್ಟಣದಲ್ಲಿ ಜರುಗಿತು.

ಇದೇ ಸಂದರ್ಭದಲ್ಲಿ 2025–26ನೇ ಸಾಲಿನ ಜಿಲ್ಲಾಮಟ್ಟದ ಕ್ರೀಡಾಕೂಟದಲ್ಲಿ ಭಾಗವಹಿಸಿ ವಿಜೇತರಾಗಿ ರಾಜ್ಯ ಮಟ್ಟಕ್ಕೆ ಆಯ್ಕೆಯಾದ ಕ್ರೀಡಾಪಟುಗಳಿಗೆ ತಾಲೂಕಾ ಶಾಖೆಯಿಂದ ಅಭಿನಂದನಾ ಪತ್ರಗಳನ್ನು ನೀಡಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಹಾಗೂ ರಾಜ್ಯ ಉಪಾಧ್ಯಕ್ಷ ಡಾ. ಬಸವರಾಜ ಬಳ್ಳಾರಿ, ಸಂಘದ ವತಿಯಿಂದ ಹಲವಾರು ಕಾರ್ಯಕ್ರಮಗಳನ್ನು ಆಯೋಜಿಸುತ್ತಿದ್ದು, ಅದರಲ್ಲಿ ಎನ್‌ಎಂಎಂಎಸ್ ಉಚಿತ ತರಬೇತಿಯೂ ಒಂದಾಗಿದೆ. ಎನ್‌ಎಂಎಂಎಸ್‌ದಿಂದ ಮಕ್ಕಳಿಗೆ ಹೆಚ್ಚು ಉಪಯೋಗವಾಗಲಿದ್ದು, ಅವರ ಭವಿಷ್ಯಕ್ಕೆ ಸಹಾಯಕಾರಿಯಾಗುತ್ತದೆ. ಲಕ್ಷ್ಮೇಶ್ವರ ತಾಲೂಕು ಶಾಖೆಯು ಗದಗ ಜಿಲ್ಲೆಗೆ ಮತ್ತು ರಾಜ್ಯಕ್ಕೆ ಮಾದರಿಯೆಂದು ಸಂತಸ ವ್ಯಕ್ತಪಡಿಸಿದರು.

ನಿಕಟಪೂರ್ವ ಅಧ್ಯಕ್ಷ ರವಿ ಗುಂಜೀಕರ ಮಾತನಾಡಿ, ನೌಕರರಿಗೆ ಅನುಕೂಲವಾಗುವ ರೀತಿ ಸಂಘಟನೆಯ ಕೆಲಸ ಕಾರ್ಯಗಳನ್ನು ಮಾಡಬೇಕು ಎಂದು ಸಲಹೆ ನೀಡಿದರು.

ಸಭೆಯಲ್ಲಿ ತಾಲೂಕಾಧ್ಯಕ್ಷ ಗುರುರಾಜ ಹವಳದ, ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ನಾಣಕಿ ನಾಯಕ, ಎಂ.ಎಂ. ನಿಟ್ಟಾಲಿ, ಜಿಲ್ಲಾ ಉಪಾಧ್ಯಕ್ಷ ಶ್ರೀಧರ್, ಜಿಲ್ಲಾ ಕಾರ್ಯದರ್ಶಿ ಮಲಕಶೆಟ್ಟಿ, ಆಯ್.ಎ. ಗಾಡಗೋಳಿ, ತಾಲೂಕಾ ಕಾರ್ಯದರ್ಶಿ ಎಂ.ಎ. ನದಾಫ್, ರಾಜ್ಯ ಪರಿಷತ್ ಸದಸ್ಯ ಎ.ಬಿ. ಗೌಡರ, ಎಮ್.ಡಿ. ವಾರದ, ಎಂ.ಎಸ್. ಹಿರೇಮಠ, ಎಲ್. ಎನ್. ನಂದೆಣ್ಣವರ, ಮಂಜುನಾಥ ಕೊಕ್ಕರಗುಂದಿ, ಬಿ.ಎಂ. ಯರಗುಪ್ಪಿ, ಫಕೀರಪ್ಪ ಹೂಗಾರ್, ಮಹಮ್ಮದ್‌ಹನೀಫ್ ಶಿರಹಟ್ಟಿ, ಎ.ಎಮ್. ಅಕ್ಕಿ, ಪ್ರಶಾಂತ ಸನದಿ ಇದ್ದರು. ನವೀನ ಅಂಗಡಿ ನಿರೂಪಿಸಿದರು.



**ಕರ್ನಾಟಕ ದಲಿತ ಸಂಘರ್ಷ ಸಮಿತಿಯ ಆಶ್ರಯದಲ್ಲಿ ಮುಕ್ತ ಹಾರ್ಡ್ ಟೆನ್ನಿಸ್ ಬಾಲ್ ಕ್ರಿಕೆಟ್ ಪಂದ್ಯಾವಳಿ**

# ಗ್ರಾಮೀಣ ಕ್ರೀಡೆಗಳಿಗೆ ಆದ್ಯತೆ ನೀಡಿ



■ವಿಜಯಸಾಕ್ಷಿ ಸುದ್ದಿ, ಡಂಬಳ

ರಾಷ್ಟ್ರೀಯ ಆಟಗಳ ಪೈಪೋಟಿಯಲ್ಲಿ ಗ್ರಾಮೀಣ ಕ್ರೀಡೆಗಳು ನಶಿಸುತ್ತಿದ್ದು, ಯುವಕ ಸಂಘಗಳು ಕಬಡ್ಡಿ, ಕುಸ್ತಿ, ಖೋಖೋ ಮುಂತಾದ ಗ್ರಾಮೀಣ ಕ್ರೀಡೆಗಳಿಗೆ ಆದ್ಯತೆ ನೀಡುವ ಮೂಲಕ ಅವುಗಳನ್ನು ಉಳಿಸಿ ಬೆಳೆಸಬೇಕು. ಇಂತಹ ಆಟಗಳನ್ನು ಆಯೋಜಿಸುವದರಿಂದ ಗ್ರಾಮೀಣ ಪ್ರದೇಶದ ಪ್ರತಿಭೆಗಳನ್ನು ಗುರುತಿಸಿ ಪ್ರೋತ್ಸಾಹಿಸಲು ಸಹಕಾರಿಯಾಗುತ್ತದೆ ಎಂದು ಮುಂಡರಗಿ ತಾಲೂಕಾ ಬಿಜೆಪಿ ಮುಖಂಡ ಆನಂದಗೌಡ ಹನಮಂತಗೌಡ ಪಾಟೀಲ ಅಭಿಪ್ರಾಯಪಟ್ಟರು.

ಡಂಬಳ ಗ್ರಾಮದಲ್ಲಿ 286ನೇ ತೋಂಟದಾರ್ಯ ಜಾತ್ರಾ ಮಹೋತ್ಸವದ ಪ್ರಯುಕ್ತ ಡಾ. ಬಿ.ಆರ್. ಅಂಬೇಡ್ಕರ ಯುವಕ ಮಂಡಳ, ಪ್ರೊ. ಬಿ.ಕೃಷ್ಣಪ್ಪ ಸ್ಥಾಪಿತ ಕರ್ನಾಟಕ ದಲಿತ ಸಂಘರ್ಷ ಸಮಿತಿಯ ಆಶ್ರಯದಲ್ಲಿ ನಡೆದ ಮುಕ್ತ ಹಾರ್ಡ್ ಟೆನ್ನಿಸ್ ಬಾಲ್ ಕ್ರಿಕೆಟ್ ಪಂದ್ಯಾವಳಿಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಯುವ ಸಮೂಹ ಮೊಬೈಲ್ ಬಳಕೆಯ ದಾಸರಾಗದೆ ಆರೋಗ್ಯದ ರಕ್ಷಣೆಗೆ ಆದ್ಯತೆ ನೀಡಬೇಕು. ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಕ್ರೀಡಾ ಕ್ಷೇತ್ರಕ್ಕೆ ಸಾಕಷ್ಟು ಯೋಜನೆಗಳನ್ನು ಜಾರಿಗೆ ತಂದಿದ್ದು, ಅವುಗಳನ್ನು ಸದುಪಯೋಗಪಡಿಸಿಕೊಳ್ಳಬೇಕೆಂದು ಸಲಹೆ ನೀಡಿದರು.

ಜಿ.ಪಂ ಮಾಜಿ ಸದಸ್ಯ ಹೇಮಗಿರೀಶ ಹಾವಿನಾಳ ಪ್ರಾಸ್ತಾವಿಕವಾಗಿ ಮಾತನಾಡಿ, ರಾಷ್ಟ್ರೀಯ ಆಟಗಳೊಂದಿಗೆ ಕಬಡ್ಡಿಯು ಇತ್ತೀಚೆಗೆ ಜನಾಕರ್ಷಣೆಯ ಕ್ರೀಡೆಯಾಗಿದೆ. ಅಪ್ಪಟ ಗ್ರಾಮೀಣ ಕ್ರೀಡೆಯಾದ ಕಬಡ್ಡಿ ಹೊಸ ಅಲೆಯ ಮೂಲಕ ಜನರ ಮನಸ್ಸು ಆಕರ್ಷಿಸುತ್ತಿದೆ. ಕ್ರೀಡೆಯಲ್ಲಿ ಸೋಲು ಮತ್ತು ಗೆಲುವು ಒಂದೇ ನಾಣ್ಯದ ಎರಡು ಮುಖಗಳಿದ್ದಂತೆ. ಅವುಗಳನ್ನು ಸಮನಾಗಿ ಸ್ವೀಕರಿಸಬೇಕೆಂದು ಸಲಹೆ ನೀಡಿದರು.

ಯುವ ಮುಖಂಡ ಗೋಣಿಬಸಪ್ಪ ಎಸ್.ಕೊರ್ಲಹಳ್ಳಿ, ದಲಿತ ಸಂಘರ್ಷ ಸಮಿತಿ ತಾಲೂಕು ಸಂಚಾಲಕ ಸೋಮಪ್ಪ ಹೈತಾಪೂರ ಮಾತನಾಡಿದರು. ಆಶಾ ಕಾರ್ಯಕರ್ತೆಯರು ಹಾಗೂ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ ಸಾಧಕರನ್ನು ಸನ್ಮಾನಿಸಲಾಯಿತು.

ದಲಿತ ಸಂಘರ್ಷ ಸಮಿತಿ ಜಿಲ್ಲಾ ಸಂಚಾಲಕ ದುರಗಪ್ಪ ಹರಿಜನ, ಮುಖಂಡರಾದ ಮಲ್ಲಪ್ಪ ಮಠದ, ಕುಬೇರಪ್ಪ ಬಂಡಿ, ಮಹೇಶ ಗುಡ್ಡದ, ಕೆ.ಎನ್. ದೊಡ್ಡಮನಿ, ಪ್ರಕಾಶ ಕೊತಂಬ್ರಿ, ಹಾಲಪ್ಪ ತಾಮ್ರಗುಂಡಿ, ಗವಿಸಿದ್ದಪ್ಪ ಹಾದಿಮನಿ, ಸಂಘಟನೆಯ ಪದಾಧಿಕಾರಿಗಳಾದ ನಿಂಗಪ್ಪ ಮಾದರ, ದುರಗಪ್ಪ ಮಾದರ, ಯಮನೂರಪ್ಪ ದೊಡ್ಡಮನಿ, ಶ್ರೀಕಾಂತ ಪೂಜಾರ, ಮರಿಯಪ್ಪ ದೊಡ್ಡಮನಿ, ರವಿ ತಳಗೇರಿ, ಸಣ್ಣನಿಂಗಪ್ಪ ಗೋವಿನಕೊಪ್ಪ, ನವೀನ ತಳಗೇರಿ, ಕಾಶಿನಾಥ ಪೂಜಾರ, ಶಿವಾನಂದ ಗೌಡಣ್ಣವರ, ಅಡಿವೆಪ್ಪ ಮಾಳಮ್ಮನವರ, ಹನಮಂತ ಗೌಡಣ್ಣವರ, ಲಕ್ಷ್ಮಣ ಪೂಜಾರ, ಉಮೇಶ ತಳಗೇರಿ, ಸುರೇಶ ದೊಡ್ಡಮನಿ, ಮಹಾಂತೇಶ ಕವಲೂರ, ಮೈಲಾರಿ ದೊಡ್ಡಮನಿ, ಮುತ್ತಪ್ಪ ಮಾದರ, ಕಾಶಿನಾಥ ತಳಗೇರಿ ಸೇರಿದಂತೆ ಸಂಘಟನೆಯ ಪದಾಧಿಕಾರಿಗಳು ಇದ್ದರು. ಪತ್ರಕರ್ತ ಲಕ್ಷ್ಮಣ ಎಚ್. ದೊಡ್ಡಮನಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

> ತೋಂಟದಾರ್ಯ ಮಠದ ವ್ಯವಸ್ಥಾಪಕ ಜಿ.ವಿ. ಹಿರೇಮಠ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿ, ಪ್ರಸ್ತುತ ಕಾಲಘಟ್ಟದಲ್ಲಿ ದಲಿತ ಸಮುದಾಯದವರು ಆರ್ಥಿಕವಾಗಿ, ಸಾಮಾಜಿಕವಾಗಿ, ಶೈಕ್ಷಣಿಕವಾಗಿ ಸುಧಾರಣೆಯಾಗುತ್ತಿದ್ದಾರೆ. ಇಂತಹ ಕ್ರೀಡೆಗಳನ್ನು ಆಯೋಜನೆ ಮಾಡುವದರಿಂದ ಆರೋಗ್ಯವು ಸದೃಢವಾಗುತ್ತದೆ. ಸಮುದಾಯದ ಯುವಕರು ಶಿಕ್ಷಣಕ್ಕೆ ಆದ್ಯತೆ ನೀಡಬೇಕೆಂದು ಸಲಹೆ ನೀಡಿದರು.

### ನಿಸ್ವಾರ್ಥ ಸೇವೆ, ಶೈಕ್ಷಣಿಕ, ಸಾಮಾಜಿಕ ಕಾಳಜಿಗೆ ಸಂದ ಗೌರವ

# ರಾಮಣ್ಣ ಮೇಗಲಮನಿಯವರಿಗೆ ಸಮಾಜಸೇವಾ ಪ್ರಶಸ್ತಿ

■ವಿಜಯಸಾಕ್ಷಿ ಸುದ್ದಿ, ಮುಂಡರಗಿ

ವಿದ್ಯಾರ್ಥಿಗಳ ಭವಿಷ್ಯ ರೂಪಿಸುವ ನಿಸ್ವಾರ್ಥ ಸೇವೆ, ಶೈಕ್ಷಣಿಕ ಹಾಗೂ ಸಾಮಾಜಿಕವಾಗಿ ಕಡು ಬಡವರ ಹಿತ ಕಾಯುವ ಉದ್ದೇಶದೊಂದಿಗೆ ಸೇವೆ ಸಲ್ಲಿಸುತ್ತಿರುವ ಅತ್ತಿಕಟ್ಟಿ ಗ್ರಾಮದ ಹಿರಿಯ ನೇತಾರ ಹಾಗೂ ಸಮಾಜ ಸೇವಕರಾದ ರಾಮಣ್ಣ ಮೇಗಲಮನಿ ಅವರಿಗೆ ತಾಲೂಕಾಡಳಿತದ ವತಿಯಿಂದ 77ನೇ ಗಣರಾಜ್ಯೋತ್ಸವದ ಅಂಗವಾಗಿ ಸಮಾಜಸೇವಾ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಸೋಮಪ್ಪ ಫಕೀರವ್ವ ದಂಪತಿಗಳ ಪುತ್ರ ರಾಮಣ್ಣ ಮೇಗಲಮನಿ ಅತ್ತಿಕಟ್ಟಿ ಪ್ರಾಥಮಿಕ ಶಾಲೆಯಲ್ಲಿ ಪ್ರಾಥಮಿಕ ಶಿಕ್ಷಣ, ಡೋಣಿ ಗ್ರಾಮದಲ್ಲಿ 7ನೇ ತರಗತಿ, ಹಳ್ಳಿಕೇರಿಯಲ್ಲಿ 8 ಮತ್ತು



9ನೇ ತರಗತಿ ಹಾಗೂ ಗದಗ ಬಸವೇಶ್ವರ ಶಾಲೆಯಲ್ಲಿ 10ನೇ ತರಗತಿ ವಿದ್ಯಾಭ್ಯಾಸ ಪೂರೈಸಿದರು. 30ನೇ ವಯಸ್ಸಿನಲ್ಲಿ 10ನೇ ತರಗತಿ ಪೂರ್ಣಗೊಳಿಸಿ, ಪಿಯುಸಿ ನಂತರ 35ನೇ ವಯಸ್ಸಿನಲ್ಲಿ ಗದಗ ನಗರದ ಕೆಎಸ್‌ಎಸ್ ಕಾಲೇಜಿನಲ್ಲಿ ಬಿ.ಎ. ಪದವಿ ಆರಂಭಿಸಿದರು. 50ನೇ ವಯಸ್ಸಿನಲ್ಲಿ ಉಳಿದ ವಿಷಯಗಳನ್ನು ಬರೆದು ಬಿ.ಎ. ಪದವಿಯನ್ನು ಯಶಸ್ವಿಯಾಗಿ ಪೂರ್ಣಗೊಳಿಸುವ ಮೂಲಕ ಜೀವನಪೂರ್ತಿ ಕಲಿಕೆಯ ಪ್ರೇರಣೆಯಾಗಿ ಹೊರಹೊಮ್ಮಿದ್ದಾರೆ.

> ಮಕ್ಕಳ ಶಿಕ್ಷಣವೇ ಸಮಾಜದ ಭವಿಷ್ಯ. ಸರ್ಕಾರಿ ಶಾಲೆಗಳಲ್ಲಿ ಓದುತ್ತಿರುವ ಮಕ್ಕಳಿಗೆ ಉತ್ತಮ ಅವಕಾಶಗಳು ದೊರಕಬೇಕು ಎಂಬ ಉದ್ದೇಶದಿಂದ ಈ ಸಹಾಯ ಮಾಡಲಾಗಿದೆ. ಮುಂದೆಯೂ ಶಿಕ್ಷಣ ಕ್ಷೇತ್ರಕ್ಕೆ ನನ್ನ ಸಹಕಾರ ನಿರಂತರವಾಗಿರುತ್ತದೆ.
>
> **– ರಾಮಣ್ಣ ಮೆಗಲಮನಿ.**
> ಸಮಾಜಸೇವಾ ಪ್ರಶಸ್ತಿ ಪುರಸ್ಕೃತರು.

> ರಾಮಣ್ಣ ಮೇಗಲಮನಿ ಅವರು 10 ಶಾಲೆಗಳಿಗೆ 20 ಸಾವಿರ ರೂ ಹಾಗೂ ಅತ್ತಿಕಟ್ಟಿ ಗ್ರಾಮದ ಶಾಲೆಗೆ 1.10 ಲಕ್ಷ ರೂ ನೆರವು ನೀಡುವ ಮೂಲಕ ತಾಲೂಕಿನ ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ಧಿ ಮತ್ತು ಪ್ರತಿಭಾ ಪ್ರೋತ್ಸಾಹಕ್ಕೆ ಮಹತ್ವದ ಕೊಡುಗೆ ನೀಡಿದ್ದಾರೆ. ಅವರು ಸಮಾಜಕ್ಕೆ ಮಾದರಿಯಾಗಿದ್ದಾರೆ.
>
> **– ಗಂಗಾಧರ ಅಣ್ಣಿಗೇರಿ.**
> ಕ್ಷೇತ್ರ ಶಿಕ್ಷಣಾಧಿಕಾರಿ, ಮುಂಡರಗಿ.

ರಾಜಕೀಯ ಹಾಗೂ ಸಮಾಜಸೇವಾ ಕ್ಷೇತ್ರದಲ್ಲಿ ಅವರು ಮಹತ್ವದ ಪಾತ್ರ ವಹಿಸಿದ್ದು, 2005ರಲ್ಲಿ ಅತ್ತಿಕಟ್ಟಿ ಗ್ರಾ.ಪಂ ಸದಸ್ಯರಾಗಿ, 2018ರಲ್ಲಿ ಎಸ್‌ಡಿಎಂಸಿ ಸದಸ್ಯರಾಗಿ, ಎಪಿಎಂಸಿ ಸದಸ್ಯರಾಗಿ ಹಾಗೂ ಮುಂಡರಗಿ ತಾಲೂಕು ಪಂಚ ಗ್ಯಾರಂಟಿ ಸಮಿತಿಯ ಸದಸ್ಯರಾಗಿ ಸೇವೆ ಸಲ್ಲಿಸಿದ್ದಾರೆ. ಜೊತೆಗೆ ದುರ್ಗಾದೇವಿ ಸಮಿತಿಯ ಅಧ್ಯಕ್ಷರಾಗಿ ಗ್ರಾಮೀಣ ಅಭಿವೃದ್ಧಿಗೆ ಶ್ರಮಿಸಿದ್ದಾರೆ.

ಕದಾಂಪುರ ಕ್ಲಸ್ಟರ್ ವ್ಯಾಪ್ತಿಯ 10 ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಿಗೆ ಪ್ರತಿ ಶಾಲೆಗೆ 20 ಸಾವಿರ ರೂ.ಗಳಂತೆ ಒಟ್ಟು 2 ಲಕ್ಷ ರೂ ದೇಣಿಗೆ ನೀಡಿದ್ದು, ಅತ್ತಿಕಟ್ಟಿ ಗ್ರಾಮದ ಶಾಲೆಗೆ 1,10,000 ರೂ ದೇಣಿಗೆ ನೀಡಿದ್ದಾರೆ. ಈ ಮೊತ್ತವನ್ನು ಬ್ಯಾಂಕ್ ಡಿಪಾಸಿಟ್ ಮಾಡಿ ಅದರ ಬಡ್ಡಿ ಹಣವನ್ನು ಪ್ರತಿವರ್ಷ ಉತ್ತಮ ಸಾಧನೆ ಮಾಡುವ ವಿದ್ಯಾರ್ಥಿಗಳಿಗೆ ಬಹುಮಾನವಾಗಿ ನೀಡುವ ವ್ಯವಸ್ಥೆ ಮಾಡಿರುವುದು ಅವರ ಸೇವೆಯ ವಿಶೇಷತೆಯಾಗಿದೆ.

ಮುಂಡರಗಿ ನಗರದ ಕ್ರೀಡಾಂಗಣದಲ್ಲಿ 80 ಸಾವಿರ ರೂ ವೆಚ್ಚದಲ್ಲಿ ಧ್ವಜಸ್ತಂಭ ನಿರ್ಮಾಣ, 1 ಲಕ್ಷ ರೂ ಕನಕಭವನ ನಿರ್ಮಾಣಕ್ಕೆ ಸಹಾಯ, ಡಂಬಳ ಗ್ರಾಮದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಮೂರ್ತಿ ಪ್ರತಿಷ್ಠಾಪನೆಗೆ 50 ಸಾವಿರ ರೂ ದೇಣಿಗೆ, ಶಾಲಾ ಪರಿಕರ ವಿತರಣೆ ಹಾಗೂ ಕಡುಬಡವರಿಗೆ ಆರ್ಥಿಕ ನೆರವು ನೀಡುತ್ತಾ ಬರುತ್ತಿದ್ದಾರೆ.

ಈ ಸೇವೆಗಾಗಿ ಅವರಿಗೆ ತಾಲೂಕು ಸಮಾಜಸೇವಾ ಪ್ರಶಸ್ತಿ, ಉತ್ತಮ ಎಸ್‌ಡಿಎಂಸಿ ಅಧ್ಯಕ್ಷ ಪ್ರಶಸ್ತಿ ಸೇರಿದಂತೆ ಜಿಲ್ಲಾ ಹಾಗೂ ರಾಜ್ಯ ಮಟ್ಟದ ಹಲವಾರು ಗೌರವಗಳು ಸಂದಿವೆ. ಅವರ ನಿರಂತರ ಜನಸೇವೆಗೆ ಗ್ರಾಮಸ್ಥರು ಅಪಾರ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

---

### 'ಕಾಳಿದಾಸ ಹಬ್ಬ-2026' ಕಾರ್ಯಕ್ರಮದಲ್ಲಿ ಎಸ್‌ಪಿ ರೋಹನ್ ಜಗದೀಶ ಅಭಿಮತ

# ಬಾಲ್ಯ ಜೀವನದ ಅತ್ಯುತ್ತಮವಾದ ಘಟ್ಟ



■ವಿಜಯಸಾಕ್ಷಿ ಸುದ್ದಿ, ಗದಗ

ಪಾಲಕರು ತಮ್ಮ ಜೀವನದಲ್ಲಿ ಎಷ್ಟೇ ಎತ್ತರವಾಗಿ ಬೆಳೆದರೂ, ಶ್ರೀಮಂತ, ಬಡವ ಮತ್ತು ಯಾವುದೇ ವರ್ಗವಾದರೂ ಸಹ ಅವರು ಅತ್ಯುತ್ತಮವಾಗಿ ಬಿಂಬಿಸುವ ನಿಧಿ ಎಂದರೆ ತಮ್ಮ ಮಕ್ಕಳ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ ಅಭಿಪ್ರಾಯಪಟ್ಟರು.

ನಗರದ ಬಯಲು ಆಂಜನೇಯ ದೇವಸ್ಥಾನದ ಆವರಣದಲ್ಲಿ ಶ್ರೀ ಕಾಳಿದಾಸ ಪೂರ್ವ ಪ್ರಾಥಮಿಕ, ಕಿರಿಯ ಪ್ರಾಥಮಿಕ ಆಂಗ್ಲ ಮಾಧ್ಯಮ ಶಾಲೆ ಹಾಗೂ ರಾಕೇಶ ಸಿದ್ದರಾಮಯ್ಯ ಕನ್ನಡ ಮಾಧ್ಯಮ ಪ್ರಾಥಮಿಕ ಶಾಲೆಯ ಸಹಯೋಗದಲ್ಲಿ ಜರುಗಿದ ಕಾಳಿದಾಸ ಹಬ್ಬ-2026 ಹಾಗೂ ವಾರ್ಷಿಕೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ಪ್ರತಿ ತಂದೆ-ತಾಯಂದಿರು ತಮ್ಮ ಮಕ್ಕಳಲ್ಲಿರುವ ಪ್ರತಿಭೆಯನ್ನು ಗುರುತಿಸಿ ಸ್ಪರ್ಧೆಗಳಲ್ಲಿ ಪಾಲ್ಗೊಳ್ಳುವಂತೆ ಪ್ರೋತ್ಸಾಹಿಸಬೇಕು. ಅವರು ಸ್ಪರ್ಧೆಯಲ್ಲಿ ಯಾವುದೇ ಸ್ಥಾನ ಪಡೆದರೂ ಅವರಲ್ಲಿ ಆತ್ಮಸ್ಥೈರ್ಯ ತುಂಬಿ ಪ್ರೇರಣೆ ನೀಡಬೇಕು ಎಂದು ಹೇಳಿದರು.

ಕುರುಬರ ಸಂಘದ ಜಿಲ್ಲಾಧ್ಯಕ್ಷ ಫಕೀರಪ್ಪ ಹೆಬಸೂರ ಮಾತನಾಡಿ, ಸಮಾಜಕ್ಕೆ ಏನಾದರೂ ಕೊಡಬೇಕು ಎನ್ನುವ ನಿಟ್ಟಿನಲ್ಲಿ ದಿ. ಪಿ.ಎಲ್. ಕೊಪ್ಪದ, ಶಶಿಧರ ರೊಳ್ಳಿ ಹಾಗೂ ನಾನು ಸೇರಿಕೊಂಡು ಶಿಕ್ಷಣ ಸಂಸ್ಥೆಯನ್ನು ಸ್ಥಾಪಿಸಿದ್ದೇವೆ. ಯಾವುದೇ ಸಮಾಜವಾಗಲಿ, ಮಕ್ಕಳಿಗೆ ಶಿಕ್ಷಣ ನೀಡಬೇಕು. ರಾಜ್ಯದಲ್ಲಿ ಮೊದಲ ಬಾರಿಗೆ ಖಾಸಗಿ ಶಿಕ್ಷಣ ಸಂಸ್ಥೆಯಿಂದ ಮಹಿಳಾ ವಸತಿ ನಿಲಯಗಳನ್ನು ಆರಂಭಿಸಲಾಗಿದೆ. ನಮ್ಮ ಸಂಸ್ಥೆಯ ವಿದ್ಯಾರ್ಥಿಗಳು ಉತ್ತಮ ಶಿಕ್ಷಣ ಪಡೆದು ಸಾಧನೆ ಮಾಡಬೇಕು ಎಂದು ಹೇಳಿದರು.

> ಡಿಡಿಪಿಐ ಆರ್.ಎಸ್. ಬುರಡಿ ಮಾತನಾಡಿ, ತಮ್ಮ ಮಕ್ಕಳಿಗೆ ಯಾವ ಕಷ್ಟವೂ ಬರಬಾರದು ಎಂದು ತಾವೇ ಸಾಕಷ್ಟು ಕಷ್ಟ ಪಡುತ್ತಾರೆ. ಮಕ್ಕಳ ಬದುಕಿಗಾಗಿ ಸಾಕಷ್ಟು ತ್ಯಾಗ ಮಾಡುತ್ತಾರೆ. ಇದು ಕಲಿಯುವ ಮಕ್ಕಳಿಗೂ ಗೊತ್ತಾಗಬೇಕು. ಶಿಕ್ಷಕರು ಮಕ್ಕಳಿಗೆ ಓದುವ ವಾತಾವರಣವನ್ನು ನಿರ್ಮಿಸಿ ಅವರಿಗೆ ಅವಕಾಶ ಕಲ್ಪಿಸುವ ಮೇಧಾವಿಗಳಾಗಿರುತ್ತಾರೆ. ಮಕ್ಕಳು ಸಾಧನೆ ಮಾಡಲು ಶಿಕ್ಷಕರ ಮಾರ್ಗದರ್ಶನ ಅನಿವಾರ್ಯವಾಗಿದೆ. ಸಂಸ್ಕಾರ, ಸ್ಫೂರ್ತಿ, ಬೆಂಬಲ ಮತ್ತು ತಪ್ಪು ಮಾಡಿದಾಗ ತಿದ್ದಿ ಹೇಳುವ ನೀತಿ ಪಾಠಗಳನ್ನು ಶಿಕ್ಷಕರು ಮತ್ತು ಪಾಲಕರು ಮಕ್ಕಳಿಗೆ ಹೇಳಿಕೊಡಬೇಕು ಎಂದು ಹೇಳಿದರು.

ನೀಲಕಂಠ ಮರಡಿ ಪ್ರಾಸ್ತಾವಿಕವಾಗಿ ಮಾತನಾಡಿ, ಮುಂದಿನ ವರ್ಷ ಶ್ರೀಕಾಳಿದಾಸ ಶಿಕ್ಷಣ ಸಂಸ್ಥೆಗೆ 25 ವರ್ಷಗಳಾಗುತ್ತಿರುವದರಿಂದ ವರ್ಷಪೂರ್ತಿ ಸಾಕಷ್ಟು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಪ್ರಮುಖವಾಗಿ ಆರೋಗ್ಯ ತಪಾಸಣೆ, ಉದ್ಯೋಗ ಮೇಳ, ರಕ್ತದಾನ ಶಿಬಿರ, ಮನರಂಜನೆ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಬಿಗ್‌ಬಾಸ್ ವಿಜೇತರಾದ ಗಿಲ್ಲಿ ನಟ ಅವರು ಭಾಗವಹಿಸುವ ನಿರೀಕ್ಷೆಯಿದೆ ಎಂದು ಹೇಳಿದರು.

ಗ್ರಾಮೀಣ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿ, ಶಶಿಧರ ರೊಳ್ಳಿ, ಬೆಂಗಳೂರಿನ ಸ್ಲಂ ಬೋರ್ಡ್‌ನ ರಾಜ್ಯ ನಿರ್ದೇಶಕ ರಾಮಕೃಷ್ಣ, ರಾಣಿ ಚೆನ್ನಮ್ಮ ಕೋ-ಆಪರೇಟಿವ್ ಸೊಸೈಟಿಯ ಅಧ್ಯಕ್ಷ ಎಸ್.ಕೆ. ಮ್ಯಾಗೇರಿ, ಬಯಲು ಆಂಜನೇಯ ದೇವಸ್ಥಾನ ಕಮಿಟಿಯ ಉಪಾಧ್ಯಕ್ಷ ಎಸ್.ಎ. ಗಡಾದ, ಕಾಳಿದಾಸ ಶಿಕ್ಷಣ ಸಮಿತಿಯ ಅಧ್ಯಕ್ಷ ಬಿ.ಬಿ. ಬಾವಿಕಟ್ಟಿ, ಕಾರ್ಯದರ್ಶಿಗಳಾದ ವೈ.ಬಿ. ಬಾಣಾಪುರ, ಶಿಶುಪಾಲನಾ ಕೇಂದ್ರದ ಕಾರ್ಯದರ್ಶಿ ವಿಜಯಲಕ್ಷ್ಮೀ ದೊಡ್ಡಣ್ಣವರ ಮುಂತಾದವರು ಉಪಸ್ಥಿತರಿದ್ದರು.


ಶಿಕ್ಷಕಿಯರಾದ ಮಧುಮತಿ ಹಾಗೂ ಗಂಗಾ ಪ್ರಾರ್ಥಿಸಿದರು. ಶಿಕ್ಷಕಿ ಶಭಿನಾತಾಜ್ ಕಾರ್ಯಕ್ರಮ ನಿರೂಪಿಸಿದರು.

---

# ಹೈಬ್ರಿಡ್ ಕಾಡು ಬೆಕ್ಕು ಪತ್ತೆ

■ವಿಜಯಸಾಕ್ಷಿ ಸುದ್ದಿ, ರೋಣ

ತಾಲೂಕಿನ ಇಟಗಿ ಹಾಗೂ ಅಬ್ಬಿಗೇರಿ ಗ್ರಾಮದ ಬಳಿ ಎರಡು ಹೈಬ್ರಿಡ್ ಕಾಡು ಬೆಕ್ಕುಗಳು ಪತ್ತೆಯಾಗಿದ್ದು, ಅರಣ್ಯ ಇಲಾಖೆಯ ಸಿಬ್ಬಂದಿಗಳಿಗೆ ಅಚ್ಚರಿ ಮೂಡಿಸಿದೆ. ಹೈಬ್ರಿಡ್ ಕಾಡು ಬೆಕ್ಕು ರಾಜ್ಯದಲ್ಲಿ ಮೊದಲ ಬಾರಿಗೆ ನೆಲಮಂಗಲ ತಾಲೂಕಿನ ಮರಳುಕುಂಟೆ ಗ್ರಾಮದ ಜಮೀನೊಂದರಲ್ಲಿ ಪತ್ತೆಯಾಗಿತ್ತು. ನಂತರ ರೋಣ ತಾಲೂಕಿನಲ್ಲಿ ಈ ವಿಧದ ಕಾಡು ಬೆಕ್ಕು ಕಂಡುಬಂದಿದೆ. ರೋಣ ಅರಣ್ಯಾಧಿಕಾರಿ ಅನ್ವರ ಕೊಲ್ಹಾರ ತಮ್ಮ ತಂಡದೊಂದಿಗೆ



ವನ್ಯಜೀವಿಗಳ ಗಣತಿ ಕಾರ್ಯದಲ್ಲಿ ತೊಡಗಿದ್ದ ಸಂದರ್ಭದಲ್ಲಿ ಹೈಬ್ರಿಡ್ ಕಾಡು ಬೆಕ್ಕುಗಳು ಪತ್ತೆಯಾಗಿವೆ ಎಂದು ಜೀವವೈವಿಧ್ಯ ಸಂಶೋಧಕ ಮಂಜುನಾಥ ನಾಯಕ ತಿಳಿಸಿದ್ದಾರೆ.

---

# ಬದರಿನಾಥ್-ಕೇದಾರನಾಥ ದೇವಾಲಯಗಳಿಗೆ ಹಿಂದೂಯೇತರರ ಪ್ರವೇಶ ನಿಷೇಧ ಸಾಧ್ಯತೆ

■ವಿಜಯಸಾಕ್ಷಿ ಸುದ್ದಿ, ಉತ್ತರಾಖಂಡ

ಉತ್ತರಾಖಂಡದ ಹಿಮಾಲಯದ ಮಡಿಲಲ್ಲಿ ನೆಲೆಗೊಂಡಿರುವ ಶತಮಾನಗಳಷ್ಟು ಹಳೆಯದಾದ ಬದರಿನಾಥ್ ಮತ್ತು ಕೇದಾರನಾಥ ದೇವಾಲಯಗಳಿಗೆ ಶೀಘ್ರದಲ್ಲೇ ಹಿಂದೂಗಳಿಗೆ ಮಾತ್ರ ಪ್ರವೇಶ ಅನುಮತಿಸಬಹುದು. ಚಾರ್ ಧಾಮ್ ತೀರ್ಥಯಾತ್ರೆಯ ಭಾಗವಾಗಿರುವ ಎರಡು ದೇವಾಲಯಗಳಿಗೆ ಹಿಂದೂಯೇತರರನ್ನು ಪ್ರವೇಶಿಸುವುದನ್ನು ನಿಷೇಧಿಸಲಾಗುವುದು ಎಂದು ಈ ದೇವಾಲಯಗಳನ್ನು ನಿರ್ವಹಿಸುವ ದೇವಾಲಯ ಸಂಸ್ಥೆ ಘೋಷಿಸಿದೆ ಎಂದು ರಾಷ್ಟ್ರೀಯ ಮಾಧ್ಯಮಗಳು ವರದಿ ಮಾಡಿವೆ.

ಬದರಿನಾಥ್-ಕೇದಾರನಾಥ ದೇವಾಲಯ ಸಮಿತಿ (ಬಿಕೆಟಿಸಿ) ನಿಯಂತ್ರಿಸುವ ಎಲ್ಲ ದೇವಾಲಯಗಳಿಗೆ ಹಿಂದೂಯೇತರರ ನಿಷೇಧವು ಅನ್ವಯಿಸುತ್ತದೆ, ಇದರಲ್ಲಿ ಬದರಿನಾಥ್-ಕೇದಾರನಾಥ ಧಾಮವೂ ಸೇರಿದೆ ಎಂದು ದೇವಾಲಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಈ ಕುರಿತು ಪ್ರಸ್ತಾವನೆಯನ್ನು ಮುಂಬರುವ ದೇವಾಲಯ ಸಮಿತಿ ಮಂಡಳಿ ಸಭೆಯಲ್ಲಿ ಅಂಗೀಕರಿಸಲಾಗುವುದು.

ಈ ನಿರ್ಧಾರವನ್ನು ಸಮರ್ಥಿಸುತ್ತಾ, ಬಿಕೆಟಿಸಿ ಅಧ್ಯಕ್ಷ ಹೇಮಂತ್ ದ್ವಿವೇದಿ ಮಾತನಾಡಿ, ದೇವಾಲಯಗಳು ಪ್ರವಾಸಿ ಕೇಂದ್ರಗಳಲ್ಲ ಮತ್ತು ಪ್ರವೇಶವು ನಾಗರಿಕ ಹಕ್ಕುಗಳ ಸಮಸ್ಯೆಯಲ್ಲ ಎಂದು ವಾದಿಸಿದರು.

"ಕೇದಾರನಾಥ ಮತ್ತು ಬದರಿನಾಥ ಧಾಮಗಳು ಪ್ರವಾಸಿ ತಾಣಗಳಲ್ಲ. ಇವು ಆದಿ ಶಂಕರಾಚಾರ್ಯರು ಸ್ಥಾಪಿಸಿದ ವೈದಿಕ ಸಂಪ್ರದಾಯದ ಕೇಂದ್ರಗಳಾಗಿವೆ.

---

### ಹಿಂದೂ ಜನಜಾಗೃತಿ ಸಮಿತಿ ವತಿಯಿಂದ 'ಹಿಂದೂ ರಾಷ್ಟ್ರ ಜಾಗೃತಿ ಸಭೆ'


# ಹಿಂದೂ ರಾಷ್ಟ್ರ' ಘೋಷಣೆ ಅನಿವಾರ್ಯ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಭಾಷೆಗಳ ವಿಚಾರದಲ್ಲಿ ಭಿನ್ನಾಭಿಪ್ರಾಯ ಮೂಡಿಸುವದು, ರಾಷ್ಟ್ರಪುರುಷರ ಹೆಸರಿನಲ್ಲಿ ಗುಂಪುಗಳನ್ನು ಮಾಡುವ ಮೂಲಕ ಹಿಂದೂ ಸಮಾಜವನ್ನು ಒಡೆಯುವ ಷಡ್ಯಂತ್ರವನ್ನು ಸಮಾಜಘಾತುಕ ಶಕ್ತಿಗಳು ಮಾಡುತ್ತಿದ್ದು, ಇದನ್ನು ತಡೆಯುವ ಕಾರ್ಯ ಹಿಂದೂಗಳಿಂದ ಆಗಬೇಕಾಗಿದೆ ಎಂದು ಹಿಂದೂ ಜನ ಜಾಗೃತಿ ಸಮಿತಿ ಬೆಂಗಳೂರಿನ ಸಮನ್ವಯಕಾರ ಶರತಕುಮಾರ ಅಭಿಪ್ರಾಯಪಟ್ಟರು.

ಅವರು ಪಟ್ಟಣದ ಶ್ರೀ ರಂಭಾಪುರಿ ವೀರಗಂಗಾಧರ ಸಮುದಾಯ ಭವನದಲ್ಲಿ ಹಿಂದೂ ಜನ ಜಾಗೃತಿ ಸಮಿತಿ ವತಿಯಿಂದ ಸೋಮವಾರ ನಡೆದ ಹಿಂದೂ ರಾಷ್ಟ್ರ ಜಾಗೃತಿ ಸಭೆಯಲ್ಲಿ ಮಾತನಾಡಿದರು.

ಹಿಂದೂಗಳಲ್ಲಿ ಧರ್ಮ ಶಿಕ್ಷಣದ ಕೊರತೆ ಇರುವದರಿಂದ ಹಿಂದೂಗಳಿಗೆ ಹಿಂದೂಗಳೇ



ಜಾಗೃತಿ ಮೂಡಿಸುವ ಪರಿಸ್ಥಿತಿ ನಿರ್ಮಾಣದಂತಹ ದುಸ್ಥಿತಿಗೆ ಬಂದು ತಲುಪಿದ್ದೇವೆ. ಯುವಶಕ್ತಿ ದುಶ್ಚಟಗಳ ದಾಸರಾಗುತ್ತಿದ್ದು, ಅವರಿಗೆ ರಾಷ್ಟ್ರ ಧರ್ಮದ ಬಗ್ಗೆ ತಿಳಿದುಕೊಳ್ಳಲು ಸಮಯವಿಲ್ಲ. ಹಿಂದೂ ಸಮಾಜದಲ್ಲಿ ಪಾಶಿಮಾತ್ಯ ಸಂಸ್ಕೃತಿ ಬೆಳೆಯುತ್ತಿದೆ. ಸ್ವಾತಂತ್ರ್ಯ ಸಿಕ್ಕು 7 ದಶಕಗಳಿಂದ ಧರ್ಮ ಶಿಕ್ಷಣ ಅಭಾವದಿಂದ ಸಮಾಜದ ಆಚರಣೆ, ಸಂಸ್ಕೃತಿ, ಪರಂಪರೆ, ರಾಷ್ಟ್ರ ಭಕ್ತಿ ಮರೆಯುತ್ತಿದ್ದಾರೆ. ಲವ್ ಜಿಹಾದ್, ಮತಾಂತರ, ದ್ವೇಷ ಭಾಷಣ ಕಾಯ್ದೆ, ಹಿಂದೂಗಳ ಬಂಧನ, ಜನಸಂಖ್ಯಾ ಸ್ಫೋಟ ಮತ್ತು ವಕ್ಫ್ ಕಾಯ್ದೆಯಂತಹ ಗಂಭೀರ ಸವಾಲುಗಳನ್ನು ಎದುರಿಸಲು ಭಾರತವನ್ನು ಸಂವಿಧಾನಬದ್ಧ 'ಹಿಂದೂ ರಾಷ್ಟ್ರ'ವನ್ನಾಗಿ ಘೋಷಿಸುವುದು ಇಂದಿನ ಅನಿವಾರ್ಯತೆಯಾಗಿದೆ ಎಂದು ಪ್ರತಿಪಾದಿಸಿದರು.

ಹಿಂದೂ ರಾಷ್ಟ್ರ ಸ್ಥಾಪನೆಗಾಗಿ ಹಿಂದೂಗಳು ಜಾತಿ-ಪಂಥ ಮರೆತು ಸಂಘಟಿತರಾಗಬೇಕು. ಕೇವಲ ಭಾಷಣಕ್ಕೆ ಸೀಮಿತವಾಗದೆ, ಪ್ರತಿದಿನ ಒಂದು ಗಂಟೆ ಧರ್ಮ ಕಾರ್ಯಕ್ಕಾಗಿ ಸಮಯ ಮೀಸಲಿಡಬೇಕು. ವರ್ಷಕ್ಕೆ ಕೆಲವೇ ದಿನಗಳು ರಾಷ್ಟ್ರ ಭಕ್ತಿ ಮೂಡುತ್ತಿದೆ. ಭಾರತ ದೇಶದಲ್ಲಿ 100 ಕೋಟಿ ಹಿಂದೂಗಳು ಇದ್ದರೂ ಹಿಂದೂ ರಾಷ್ಟ್ರ ನಿರ್ಮಾಣ ಆಗುತ್ತಿಲ್ಲ. ಹೀಗಾಗಿ ಹಿಂದೂಗಳು ಹಿಂದೂ ರಾಷ್ಟ್ರ ಸ್ಥಾಪನೆಗೆ ಕಟಿಬದ್ಧರಾಗಿ ನಿಲ್ಲಬೇಕು. ಹಿಂದೂಗಳಲ್ಲಿ ಧರ್ಮ ಜಾಗೃತಿ ಮೂಡಬೇಕಾಗಿದೆ, ಹಿಂದೂಗಳು ಎಲ್ಲರೂ ಒಂದಾಗಿ ಸಾಗಬೇಕಿದೆ ಎಂದು ಹೇಳಿದರು.

> ಹಳಿಯಾಳದ ವಿಶ್ವ ಹಿಂದೂ ಪರಿಷತ್ ಮುಖಂಡ ಶ್ರೀಪತಿ ಭಟ್ ಮಾತನಾಡಿ, ಭಾರತ ದೇಶದಲ್ಲಿ ಬಹುಸಂಖ್ಯಾತ ಹಿಂದೂಗಳಾದ ನಾವು ಅಲ್ಪ ಸಂಖ್ಯಾತರಾಗುತ್ತಿದ್ದೇವೆ. ಇದಕ್ಕೆ ಹಿಂದೂಗಳೇ ಕಾರಣ. ಸ್ವಾರ್ಥಕ್ಕಾಗಿ ಧರ್ಮದ ವಿಚಾರ ಮಾಡದೆ ಜೀವನವನ್ನು ಸಾಗಿಸಿಕೊಂಡು ಬರುತ್ತಿರುವದರಿಂದ ಧರ್ಮ ಕುಂಠಿತಗೊಳ್ಳುತ್ತಿದೆ ಎಂದು ಹೇಳಿದರು.

ಗಿರೀಶ ಅಗಡಿ ಮಾತನಾಡಿ, ಇಂದಿನಿಂದಲೇ ಮಕ್ಕಳಿಗೆ ಶಿಕ್ಷಣದೊಂದಿಗೆ ನಮ್ಮ ಸಂಸ್ಕೃತಿ, ಆಚರಣೆ, ಧರ್ಮ ಕರ್ತವ್ಯದ ಬಗ್ಗೆ ತಿಳಿಸಿ ಅವರನ್ನು ಧರ್ಮಯೋಧರನ್ನಾಗಿ ಮಾಡಿರಿ ಎಂದರು. ವಿಠೋಭಾ ಮಾಲ್ಲೇಕರ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮಕ್ಕೂ ಮುನ್ನ ಸಂತೋಷ ಬೋಮಲೆ ಶಂಖನಾದ ಮೊಳಗಿಸಿದರು. ಈ ಸಂದರ್ಭದಲ್ಲಿ ಅಶೋಕ ಭೋಜ, ಲಕ್ಷ್ಮೀ ತಟ್ಟಿ, ಶೋಭಾ ಇಟಗಿ, ದಯಾನಂದ ಹೊನಕೇರಿ, ಜಯಶ್ರೀ ಹೆಬಸೂರ, ಗೀತಾ ಬಡಿಗೇರ, ಬೇಬಿ ರುದ್ರಶೆಟ್ಟಿ, ನವೀನ ಕುಂಬಾರ, ಪ್ರವೀಣ ಬೆನ್ನೂರ, ಪಾರ್ವತಿ ಹುಲಕೋಟಿ, ಶಾಂತಾ ಹುಲಕೋಟಿ, ಸುಮಂಗಲಾ ಕಮ್ಮಾರ ಇದ್ದರು.

---

# 'ಭಾರತದಲ್ಲಿ ಬಿಜೆಪಿ ದಾಳಿಯನ್ನು ಎದುರಿಸಲು 'ದೀದಿ'ಗೆ ಮಾತ್ರ ಸಾಧ್ಯ': ಅಖಿಲೇಶ್ ಯಾದವ್



■ವಿಜಯಸಾಕ್ಷಿ ಸುದ್ದಿ, ಕೋಲ್ಕತ್ತಾ

ಸಮಾಜವಾದಿ ಪಕ್ಷದ ಮುಖ್ಯಸ್ಥ ಅಖಿಲೇಶ್ ಯಾದವ್ ಮಂಗಳವಾರ ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅವರನ್ನು ಭೇಟಿ ಮಾಡಿ "ಬಿಜೆಪಿಯ ದಾಳಿಯನ್ನು ಎದುರಿಸುವಲ್ಲಿನ ಧೈರ್ಯ"ಕ್ಕಾಗಿ ಟಿಎಂಸಿ ಮುಖ್ಯಸ್ಥೆಯನ್ನು ಶ್ಲಾಘಿಸಿದ್ದಾರೆ.

ಉತ್ತರ ಪ್ರದೇಶದ ಮಾಜಿ ಮುಖ್ಯಮಂತ್ರಿ, ಅವರ ಪತ್ನಿ ಮತ್ತು ಲೋಕಸಭಾ ಸಂಸದೆ ಡಿಂಪಲ್ ಯಾದವ್ ಅವರೊಂದಿಗೆ ಇಲ್ಲಿನ ರಾಜ್ಯ ಕಾರ್ಯದರ್ಶಿ 'ನಬನ್ನಾ'ದಲ್ಲಿ ಬ್ಯಾನರ್ಜಿ ಅವರೊಂದಿಗೆ ಸಭೆ ನಡೆಸಿದರು.

"ಈ ದೇಶದಲ್ಲಿ ಬಿಜೆಪಿಯ ದಾಳಿಯನ್ನು 'ದೀದಿ' (ಮಮತಾ ಬ್ಯಾನರ್ಜಿ) ಮಾತ್ರ ಎದುರಿಸಬಲ್ಲರು" ಎಂದು ಬಂಗಾಳ ಮುಖ್ಯಮಂತ್ರಿಯೊಂದಿಗೆ ಇದ್ದ ಯಾದವ್ ಸಭೆಯ ನಂತರ ಸುದ್ದಿಗಾರರಿಗೆ ಹೇಳಿದರು.

"ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (SIR) ನೆಪದಲ್ಲಿ NRC ಅನ್ನು ಜಾರಿಗೆ ತರಲು ಮತ್ತು ಜನರಿಗೆ ಕಿರುಕುಳ ನೀಡಲು ಪ್ರಯತ್ನಗಳು ನಡೆಯುತ್ತಿವೆ" ಎಂದು ಅವರು ಉತ್ತರ ಪ್ರದೇಶದಲ್ಲಿ ನಡೆದ ಪಟ್ಟಿ ಪರಿಷ್ಕರಣೆ ಕಾರ್ಯದ ಅನುಭವವನ್ನು ಉಲ್ಲೇಖಿಸಿ ಆರೋಪಿಸಿದರು. ಅಲ್ಲಿ ಸುಮಾರು 2.89 ಕೋಟಿ ಮತದಾರರನ್ನು ಕರಡು ಪಟ್ಟಿಯಿಂದ ಅಳಿಸಲಾಗಿದೆ ಎಂದು ಆರೋಪಿಸಿದರು.

---

# ಅಂಚೆ ಅಧೀಕ್ಷಕರಿಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಅಂಚೆ ಇಲಾಖೆಗೆ ಅಂಚೆ ಅಧೀಕ್ಷಕರಾಗಿ ಆಗಮಿಸಿದ ಎಸ್.ಎಸ್. ಶಿರಹಟ್ಟಿ ಅವರನ್ನು ಹಾಲುಮತ ಮಹಾಸಭಾ ಹಾಗೂ ಕರ್ನಾಟಕ ಪ್ರದೇಶ ಕುರುಬರ ಸಂಘದ ಜಿಲ್ಲಾ ಯುವ ಘಟಕದ ವತಿಯಿಂದ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಹಾಲುಮತ ಮಹಾಸಭಾದ ರಾಜ್ಯಾಧ್ಯಕ್ಷ ರುದ್ರಣ್ಣ ಗುಳಗುಳಿ, ನಾಗರಾಜ ಮೇಣಸಗಿ, ಸೋಮನಗೌಡ ಪಾಟೀಲ, ಮುತ್ತು ಜಡಿ, ರಾಘು ವಗ್ಗನವರ, ಹೇಮಂತ ಗಿಡ್ಡಹನಮಣ್ಣನವರ, ಮಂಜು ಜಡಿ, ಸತೀಶ ಗಿಡ್ಡಹನಮಣ್ಣನವರ, ರವಿ ಜೋಗಿನ, ಸುರೇಶ ಹೆಬಸೂರ, ಕುಮಾರ ಮಾರನಬಸರಿ, ಪರಶುರಾಮ ಜಡಿ, ಸೋಮು ಮೇಟಿ, ಸೋಮು ಬಿಂಗಿ, ಅಂಚೆ ಇಲಾಖೆ ಅಧಿಕಾರಿಗಳಾದ ವೆಂಕಟೇಶ ಕೊಳ್ಳಿ, ಎಂ.ಟಿ. ಕರಿಗಾರ, ನವೀನ ಕೊಪ್ಪದ ಮುಂತಾದವರು ಉಪಸ್ಥಿತರಿದ್ದರು.

---


**ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಗದಗ**

ಪಿನ್ ಕೋಡ್ ನಂ. 582101. ದೂರವಾಣಿ: 08372-278003.
ಇ-ಮೇಲ್: uda-gadag@hotmail.com

ಸಂ: ನಅಪ್ರಾಗಬೆ/ಭೂಬ/2025-26/1296 ದಿನಾಂಕ: 27.01.2026

**ಪ್ರಕಟಣೆ**

ಸಾರ್ವಜನಿಕರಿಗೆ ಈ ಮೂಲಕ ತಿಳಿಸುವದೇನೆಂದರೆ, ಅರ್ಜಿದಾರರಾದ **BGK Cold Storage Pvt Ltd** ಸಾ: ಗದಗ ಇವರು ಈ ಕೆಳಕಂಡ ಜಮೀನುಗಳನ್ನು ಭೂ ಉಪಯೋಗ ಬದಲಾವಣೆ ಮಾಡಲು ಅರ್ಜಿ ಸಲ್ಲಿಸಿರುತ್ತಾರೆ. ಈ ಭೂ ಉಪಯೋಗ ಬದಲಾವಣೆಯಿಂದ ಸ್ಥಳದಲ್ಲಿ ಕೈಗಾರಿಕೆ ಮಾಡಲು ಉದ್ದೇಶಿಸಿರುತ್ತಾರೆ. ಇದರಿಂದ ಕೈಗಾರಿಕೆ ಚಟುವಟಿಕೆಗಳನ್ನು ನಡೆಸಲು ಹಾಗೂ ಹಲವರಿಗೆ ಉದ್ಯೋಗ ದೊರಕುತ್ತವೆ ಎಂದು ತಮ್ಮ ಅರ್ಜಿಯಲ್ಲಿ ತಿಳಿಸಿರುತ್ತಾರೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ **ಯೋಜನಾ ಕಾಯ್ದೆ 1961 ರ ಕಲಂ 14(ಎ)ರಂತೆ** ಭೂ ಉಪಯೋಗ ಬದಲಾವಣೆ ಮಾಡುವ ಬಗ್ಗೆ ಸಾರ್ವಜನಿಕರಿಂದ ಸಲಹೆ/ಆಕ್ಷೇಪಣೆಗಳು ಏನಾದರೂ ಇದ್ದಲ್ಲಿ ಈ ಪ್ರಕಟಣೆ ಆದ ದಿನಾಂಕದಿಂದ **15 (ಹದಿನೈದು)** ದಿನಗಳೊಳಗಾಗಿ ಆಯುಕ್ತರು, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಪಿ.ಬಿ. ರೋಡ ಗದಗ-582101. ಇವರಿಗೆ ಲಿಖಿತವಾಗಿ ಸಲ್ಲಿಸಲು ಕೋರಲಾಗಿದೆ. ಅವಧಿ ಮುಗಿದ ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

| ಅ.ನ | ಗ್ರಾಮ | ರಿ.ಸ.ನಂ | ಕ್ಷೇತ್ರ | ಮಹಾ ಯೋಜನೆ ಪ್ರಕಾರ ನಿಗಧಿಪಡಿಸಿದ ಭೂ ಉಪಯೋಗ | ಅರ್ಜಿದಾರರು ಬಯಸಿರುವ ಭೂಉಪಯೋಗ ಬದಲಾವಣೆ |
|---|---|---|---|---|---|
| 01 | ಹಾತಲಗೇರಿ | 172/*/4 | 03ಎಕರೆ-03ಗುಂಟೆ -12ಆಣೆ | ಕೃಷಿ ವಲಯ | ಕೈಗಾರಿಕೆ (Cold Storage) |

ವಾ.ಸಾ.ಇ/ಗದಗ/577/ದೇಶಪಾಂಡೆಪಬ್ಲಿಸಿಟಿ/2025-26

ಸಹಿ/- ಆಯುಕ್ತರು
ನಗರಾಭಿವೃದ್ಧಿ ಪ್ರಾಧಿಕಾರ, ಗದಗ-ಬೆಟಗೇರಿ


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka